ವಿಜಯಪುರ | ಸಂಪುಟ 01 | ಸಂಚಿಕೆ 301 | ಪುಟ 4 | ₹ 3.00

https://udayarashminews.com


# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಶುಕ್ರವಾರ, ಜನವರಿ 26, 2024



“ನಮ್ಮೆಲ್ಲ ಓದುಗ ಬಂಧುಗಳಿಗೆ ಗಣರಾಜ್ಯೋತ್ಸವ ದಿನದ ಹಾರ್ದಿಕ ಶುಭಾಶಯಗಳು. ಪ್ರಜಾಪ್ರಭುತ್ವ ದೇಶ ಮತ್ತಷ್ಟು ಸಮೃದ್ಧಿಯಾಗಲು ನಾವೆಲ್ಲರೂ ಶ್ರಮಿಸೋಣ.”

– ಇಂದುಶೇಖರ ಎಸ್. ಮಣೂರ
ಸಂಪ್ಪಾದಕರು, 'ಉದಯರಶ್ಮಿ'

ಬಿಜೆಪಿಗೆ ಜೈ ಕಾಂಗ್ರೆಸ್‌ಗೆ ಗುಡ್ ಬೈ ಎಂದ ಶೆಟ್ಟರ್ । ದೆಹಲಿಯಲ್ಲಿ ಪಕ್ಷ ಸೇರ್ಪಡೆ । ಕಾಂಗ್ರೆಸ್ಗೆ ಶಾಕ್!

# ಮರಳಿ ಗೂಡಿಗೆ ಮಾಜಿ ಸಿಎಂ ಜಗದೀಶ ಶೆಟ್ಟರ್!



ನವದೆಹಲಿ: ಲೋಕಸಭೆ ಚುನಾವಣೆ ಹೊಸ್ತಿಲಿನಲ್ಲಿ ಬಿಜೆಪಿಯ ಆಪರೇಷನ್ ಸಕ್ಸಸ್ ಆಗಿದೆ. ಕಳೆದ ವಿಧಾನಸಭೆ ಚುನಾವಣೆ ಸಮಯದಲ್ಲಿ ಹೈಕಮಾಂಡ್ ಜೊತೆ ಮುನಿಸಿಕೊಂಡು ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಯಾಗಿದ್ದ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಮತ್ತೆ ಮಾತೃ ಪಕ್ಷ ಭಾರತೀಯ ಜನತಾ ಪಕ್ಷಕ್ಕೆ ವಾಪಸಾಗಿದ್ದಾರೆ.

ಗುರುವಾರ ದೆಹಲಿಯಲ್ಲಿ ಬಿಜೆಪಿ ರಾಷ್ಟ್ರನಾಯಕರನ್ನು ಭೇಟಿ ಮಾಡಿದ ನಂತರ ಬಿಜೆಪಿಗೆ ಮತ್ತೆ ಅಧಿಕೃತವಾಗಿ ಸೇರ್ಪಡೆಯಾಗಿದ್ದಾರೆ.

ಪಕ್ಷ ಸೇರ್ಪಡೆಗೂ ಮುನ್ನ ಶೆಟ್ಟರ್ ಅವರು ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರೊಂದಿಗೆ ದೆಹಲಿಯಲ್ಲಿನ ಅಮಿತ್ ಶಾ ನಿವಾಸದಲ್ಲಿ ಅಮಿತ್ ಶಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದರು. ಮಾತುಕತೆ ವೇಳೆ ಶೆಟ್ಟರ್ ಮನವೊಲಿಸುವಲ್ಲಿ ಅಮಿತ್ ಶಾ ಯಶಸ್ವಿಯಾಗಿದ್ದು, ಪಕ್ಷಕ್ಕೆ ಮರಳಲು ಶೆಟ್ಟರ್ ಒಪ್ಪಿಗೆ ಸೂಚಿಸಿದ್ದರು.

ಕಾಂಗ್ರೆಸ್‌ಗೆ ರಾಜೀನಾಮೆ ನೀಡಿದ ಜಗದೀಶ್ ಶೆಟ್ಟರ್ ಪಕ್ಷ ಸೇರ್ಪಡೆಗೂ ಮುನ್ನ ಕಾಂಗ್ರೆಸ್ ಪಕ್ಷ ಹಾಗೂ ಎಂಎಲ್‌ಸಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಮತ್ತು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಇಮೇಲ್ ಮೂಲಕ ರಾಜೀನಾಮೆ ಪತ್ರ ರವಾನಿಸಿದ್ದಾರೆ. ರಾಜೀನಾಮೆಗೂ ಮುನ್ನ ಶೆಟ್ಟರ್ ಅವರು ಹೊರಟ್ಟಿಗೆ ಕರೆ ಮಾಡಿ ರಾಜೀನಾಮೆ ನೀಡುತ್ತಿರುವುದಾಗಿ ಹೇಳಿದ್ದರು. ಈ ವೇಳೆ ಪತ್ರದ ಮೂಲಕ ಬೇಡ, ನೇರವಾಗಿ ಬಂದು ರಾಜೀನಾಮೆ ನೀಡುವಂತೆ ಹೊರಟ್ಟಿ ಸೂಚಿಸಿದ್ದರು.

## ಮೋದಿ ಮತ್ತೆ ಪ್ರಧಾನಿಯಾಗಬೇಕು :ಶೆಟ್ಟರ್



ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಬೇಕು. ಅವರ ಕೈ ಬಲಪಡಿಸಬೇಕು, ಬಿಜೆಪಿಯ ಶಕ್ತಿ ಮತ್ತಷ್ಟು ಹೆಚ್ಚಬೇಕು, ಈ ನಿಟ್ಟಿನಲ್ಲಿ ಮತ್ತೆ ಭಾರತೀಯ ಜನತಾ ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದೇನೆ ಎಂದು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಹೇಳಿದ್ದಾರೆ.

ಮಾಜಿ ಸಿಎಂ ಬಿ ಎಸ್ ಯಡಿಯೂರಪ್ಪ, ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಅವರ ಸಮ್ಮುಖದಲ್ಲಿ ಅಧಿಕೃತವಾಗಿ ಬಿಜೆಪಿ ಸೇರ್ಪಡೆಯಾದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದೊಂದು ವರ್ಷದಲ್ಲಿ ಸಾಕಷ್ಟು ಬೆಳವಣಿಗೆಗಳಾಗಿವೆ. ಬಿಜೆಪಿ ನಾಯಕರು ನನ್ನ ಜೊತೆ ಸತತ ಸಂಪರ್ಕದಲ್ಲಿದ್ದರು. ನೀವು ಬಿಜೆಪಿಗೆ ಮತ್ತೆ ಬನ್ನಿ, ಪಕ್ಷದ ಬಲ ಹೆಚ್ಚುತ್ತದೆ, ಎಲ್ಲರೂ ಒಟ್ಟಾಗಿ ಕೆಲಸ ಮಾಡೋಣ ಎನ್ನುತ್ತಿದ್ದರು. ಪಕ್ಷದ ಹೈಕಮಾಂಡ್ ಅವರನ್ನು ಇಂದು ಭೇಟಿ ಮಾಡಿದಾಗ ಗೌರವಯುತವಾಗಿ ಬರಮಾಡಿಕೊಂಡರು. ಹೀಗಾಗಿ ಸ್ವ ಇಚ್ಛೆಯಿಂದ ಮತ್ತೆ ಬಿಜೆಪಿಗೆ ಸೇರುತ್ತಿದ್ದೇನೆ ಎಂದರು.

## ರಾಷ್ಟ್ರೀಯ ಶಿಕ್ಷಣ ನೀತಿ ಮುಂದುವರೆಸಲು ರಾಜ್ಯಪಾಲರಿಗೆ ವರದಿ

ಉದಯರಶ್ಮಿ ನ್ಯೂಸ್

ಬೆಂಗಳೂರು: ಪೀಪಲ್ಸ್ ಫೋರಂ ಫಾರ್ ಕರ್ನಾಟಕ ಎಜುಕೇಷನ್ ನಿಯೋಗ ರಾಷ್ಟ್ರೀಯ ಶಿಕ್ಷಣ ನೀತಿ (NEP)–2020 ನ್ನು ಕರ್ನಾಟಕದಲ್ಲಿ ಮುಂದುವರೆಸುವಂತೆ ರಾಜ್ಯದಾಂತ ಸಹಿ ಸಂಗ್ರಹ ಅಭಿಯಾನ ನಡೆದಿದ್ದು, ಈ ಜನಾಭಿಪ್ರಾಯದ ವರದಿಯನ್ನು ಜ.24 ಬುಧವಾರ ರಾಜಭವನ ಬೆಂಗಳೂರಿನಲ್ಲಿ ಗೌರವಾನ್ವಿತ ರಾಜ್ಯಪಾಲರನ್ನು ಬೇಟಿಯಾಗಿ ಚರ್ಚಿಸಲಾಯಿತು.

ಕರ್ನಾಟಕದ 34 ಶೈಕ್ಷಣಿಕ ಜಿಲ್ಲೆಗಳ 168 ತಾಲ್ಲೂಕುಗಳಲ್ಲಿ ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಮತ್ತು ವಿದ್ಯಾರ್ಥಿಗಳಿಂದ ಓಇಕ ಪರವಾಗಿ ಒಟ್ಟು 10,16,080 ಸಹಿ ಆಗಿದ್ದು, ಇದರ ವಿಸ್ತೃತ ವರದಿಯನ್ನು ಘನವೆತ್ತ ರಾಜ್ಯಪಾಲರಿಗೆ ಸಲ್ಲಿಸಲಾಯಿತು.



ಈ ನಿಯೋಗದಲ್ಲಿ ಶಿಕ್ಷಣ ತಜ್ಞ ಪ್ರೊ. ಮಲ್ಲೇಪುರಂ ಜಿ ವೆಂಕಟೇಶ, ಪ್ರೊ. ರವೀಂದ್ರ ರೇಶ್ಮಿ, ಮಾಜಿ ಸಚಿವ ಬಿ ಸಿ ನಾಗೇಶ, ಮಾಜಿ ಎಂಎಲ್ಸಿ ಅರುಣ ಶಹಾಪುರ, ಪ್ರೊ.ನಂದಿನಿ ಲಕ್ಷ್ಮೀಕಾಂತ, ಪ್ರೊ.ವೀರೇಶ ಬಾಳಿಕಾಯಿ, ಸಂದೀಪ ಬೂದಿಹಾಳ, ಡಾ ಗಿರೀಶ ತೆಗ್ಗಿನಮಠ ಭಾಗವಹಿಸಿದ್ದರು.

### ರಾಜ ನುಡಿ

ಸಿಹಿಯ ರುಚಿ ನಾಲಿಗೆಯ ಮುಂಭಾಗದಲ್ಲಿ, ಕಹಿಯ ರುಚಿ ನಾಲಿಗೆಯ ಹಿಂಭಾಗದಲ್ಲಿ, ಉಪ್ಪಿನ ರುಚಿ ನಾಲಿಗೆಯ ಮುಂತುದಿಯಲ್ಲಿ, ಹುಳಿಯ ರುಚಿ ನಾಲಿಗೆಯ ಬಲ ಮತ್ತು ಎಡ ಭಾಗದಲ್ಲಿ ಮಾತ್ರ ಅನುಭವಕ್ಕೆ ಬರುವಂತದ್ದು. ಜೀವನದ ಕೆಲವು ರುಚಿಗಳು ಕೆಲವೆಡೆ ಮಾತ್ರ ಸಿಗುವಂತದ್ದು. ತಿಳಿದಿರಬೇಕು.

–ಡಾ. ರಾಜಶೇಖರ ನಾಗೂರ

### ವಚನ ಚಿಂತನ 287



*ಅಂಗ ಲಿಂಗದ ಸಂಪರ್ಕಸೇತುವೆ ಇಷ್ಟಲಿಂಗ*

*ಅಂಗ, ಲಿಂಗವ ವೇಧಿಸಿ,*
*ಅಂಗ ಲಿಂಗದೊಳಗಾಯಿತ್ತು.*
*ಮನ, ಲಿಂಗವ ವೇಧಿಸಿ,*
*ಮನ ಲಿಂಗದೊಳಗಾಯಿತ್ತು.*
*ಭಾವ, ಲಿಂಗವ ವೇಧಿಸಿ,*
*ಭಾವ ಲಿಂಗದೊಳಗಾಯಿತ್ತು.*
*ಚೆನ್ನಮಲ್ಲಿಕಾರ್ಜುನಾ,*
*ನಿಮ್ಮ ಒಲುಮೆಯ ಸಂಗದಲ್ಲಿರ್ದು*
*ಸ್ವಯಲಿಂಗವಾಯಿತ್ತು.*
*– ಅಕ್ಕಮಹಾದೇವಿಯವರು*

ಇಷ್ಟಲಿಂಗದಲ್ಲಿ ತಲ್ಲೀನನಾದ ಸಾಧಕನ ಅಂಗವು ಭಿನ್ನಭಾವ ಅಳಿದು ಲಿಂಗದೊಂದಿಗೆ ಬೆರೆತುಹೋಗುತ್ತದೆ. ಲಿಂಗವೇ ಆದ ಅಂಗದೊಳಗಿನ ಮನವು ಸಹ ಪ್ರಾಣಲಿಂಗವಾಗಿ ಪರಿವರ್ತನೆಗೊಳ್ಳುತ್ತದೆ. ಅಂಗ, ಮನ ಆವರಿಸಿದ ಲಿಂಗಛಾಯೆಯು ಅಂತಿಮವಾಗಿ ಭಾವವನ್ನೂ ವೇದಿಸಿ ಭಾವಲಿಂಗವಾಗಿ ರೂಪಗೊಳ್ಳುತ್ತದೆ. ಇಂತಹ ಪರಿವರ್ತಿತ ಅಂಗ, ಮನ, ಮತ್ತು ಭಾವದ ಒಲುಮೆಗೆ ಒಲಿದ ಚೆನ್ನಮಲ್ಲಿಕಾರ್ಜುನನ ಮಹಾಲಿಂಗ ಸಂಗದ ಸಂಪರ್ಕದಿಂದ ಸ್ವಯಂಲಿಂಗವಾದ ಸಂತಸವನ್ನು ಅಕ್ಕಮಹಾದೇವಿಯವರು ವಚನದಲ್ಲಿ ಹಂಚಿಕೊಂಡಿದ್ದಾರೆ. ಅಂಗವ ಲಿಂಗಮಾಡಿ ಮಹಾಲಿಂಗದೊಂದಿಗೆ ಜೋಡಿಸುವ ಸಂಪರ್ಕ ಸೇತುವೆ ಇಷ್ಟಲಿಂಗವಾಗಿದೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಹಳೇ ಪಿಂಚಣಿ ಯೋಜನೆ ಜಾರಿಗೊಳಿಸಲು ಆಗ್ರಹ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ: ಹೊಸ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೇ ಪಿಂಚಣಿ ಯೋಜನೆ ಜಾ–ರಿಗೊಳಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಸರಕಾರಿ ಎನ್‌ಪಿಎಸ್ ನೌಕರ ಸಂಘದ ತಾಲೂಕಾ ಘಟಕದ ವತಿಯಿಂದ ಶಾಸಕ ಸಿ.ಎಸ್.ನಾಡಗೌಡ ಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ವೇಳೆ ಎನ್.ಪಿ.ಎಸ್ ನೌಕರರ ಸಂಘದ ಖಜಾಂಚಿ ಸಂಗಮೇಶ ನವಲಿ ಮಾತನಾಡಿ, ತಮ್ಮ ಸರಕಾರ ಚುನಾವಣೆಯ ಪ್ರಣಾಳಿಕೆಯಲ್ಲಿ ಹೊಸ ಪಿಂಚಣಿ ಯೋಜನೆ ರದ್ದುಗೊಳಿಸಿ ಹಳೇ ಪಿಂಚಣಿ ಯೋಜನೆ ಜಾ–ರಿಗೊಳಿಸುವ ಕುರಿತು ಹೇಳಿತ್ತು. ಅದರಂತೆ ರಾಜ್ಯದ 2.5 ಲಕ್ಷ ಸರಕಾರಿ ನೌಕರರು ಹಾಗೂ 2.5 ಲಕ್ಷ ನಿಗಮ ಮಂಡಳಿ ಅನುದಾನಿತ ಹಾಗೂ ಸ್ವಾಯತ್ತ ಸಂಸ್ಥೆಗಳ ನೌಕರರು ತಮ್ಮ ಕುಟುಂಬದೊಂದಿಗೆ ವೋಟ್ ಫಾರ್ ಓಪಿಎಸ್ ಕಾರ್ಯಕ್ರಮ (ಹಳೆ ಪಿಂಚಣಿ ನೀಡುವವರಿಗೆ ಮತ ನೀಡಿ) ಮಾಡುವುದರ ಮೂಲಕ ತಮ್ಮ ಸರಕಾರವನ್ನು ಬೆಂಬಲಿಸಿದೆ. ಈಗಾಗಲೇ ತಮ್ಮ ಸರಕಾರ ಐದು ಜನಪರ ಭರವಸೆಗಳನ್ನು ಅನುಷ್ಠಾನಗೊಳಿಸಿದೆ. ಆರನೇ ಭರವಸೆಯಾದ ಹಳೆ ಪಿಂಚಣಿ ಯೋಜನೆಯನ್ನು ಜಾರಿ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯನವ–ರಿಗೆ ಒತ್ತಡ ತರಬೇಕೆಂದು ವಿನಂತಿಸಿಕೊಂಡರು.

ಮನವಿಗೆ ಪ್ರತಿಕ್ರಿಸಿದ ಶಾಸಕರು ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಎಲ್ಲ ಇಲಾಖೆಗಳ ನೌಕರರಿಗೆ ಹಳೆ ಪಿಂಚಣಿ ಒದಗಿಸುವುದಾಗಿ ಭರವಸೆ ನೀಡಿದರು.

ಈ ವೇಳೆ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಬಸವರಾಜ ಮುದ್ನೂರ, ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ವಿ.ಎಂ.ಪಾಟೀಲ, ಉಪಾಧ್ಯಕ್ಷ ರಾಜಶೇಖರ ಗೋನಾಳ, ಪ್ರಧಾನ ಕಾರ್ಯದರ್ಶಿ ವಿಠ್ಠಲ ಖಿಲಾರಟ್ಟಿ, ಆನಂದಗೌಡ ಬಿರಾದಾರ, ಮಹಮ್ಮದ್ ರಫೀಕ್ ಭಾಗವಾನ, ಚಿಕ್ಕ ಮಕ್ಕಳ ತಜ್ಞವೈದ್ಯ ಪರಶುರಾಮ ವಡ್ಡರ, ಮಹಾಂತೇಶ ಪೂಜಾರಿ, ಗಂಗಣ್ಣ ಗೌರೋಜಿ, ಲಕ್ಷ್ಮಣ ರಾಠೋಡ, ಶಿವಪುತ್ರ ಸಜ್ಜನ, ಗುಂಡು ಚೌವ್ಹಾಣ ಸೇರಿದಂತೆ ಮತ್ತಿತರರು ಇದ್ದರು.

## ಡಾ.ಅಂಬೇಡ್ಕರ ಪ್ರತಿಮೆಗೆ ಅವಮಾನ :ಡಿಎಸ್ಸೆಸ್ ಪ್ರತಿಭಟನೆ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ಕಲಬುರಗಿ ನಗರದ ಕೋಟನೂರ ಲುಂಬಿಣಿ ಉದ್ಯಾನದಲ್ಲಿ ಡಾ. ಅಂಬೇಡ್ಕರರವರ ಪ್ರತಿಮೆಗೆ ಅವಮಾನಗೊಳಿಸಿದ ಘಟನೆಯನ್ನು ಖಂಡಿಸಿ ಬಂಧಿತ ದುಷ್ಕರ್ಮಿಗಳ ಮೇಲೆ ಕಠಿಣ ಕ್ರಮ ಕೈಕೊಳ್ಳಬೇಕೆಂದು ಆಗ್ರಹಿಸಿ ದಲಿತ ಸಂಘರ್ಷ ಸಮೀತಿಯ(ನಾಗಾವಾರ ಬಣ) ಪದಾಧಿಕಾರಿಗಳು ತಹಶೀಲ್ದಾರ್ ಪ್ರಕಾಶ ಸಿಂದಗಿ ಅವರ ಮೂಲಕ ರಾಜ್ಯಪಾಲ–ರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಹಶೀಲ್ದಾರ ಕಚೇರಿ ಆವರಣಕ್ಕೆ ಗುರುವಾರ ಆಗಮಿಸಿದ ದಲಿತ ಸಂಘರ್ಷ ಸಮೀತಿಯ ಸದಸ್ಯರು ಪ್ರತಿಭಟನೆ ಕೈಗೊಂಡರು. ಪ್ರತಿಭಟನೆಯ ನೇತೃತ್ವ ವಹಿಸಿದ್ದ ದ.ಸಂಸ ತಾಲ್ಲೂಕು ಸಂಚಾಲಕ ಪ್ರಕಾಶ ಗುಡಿಮನಿ ಮಾತನಾಡಿ, ಸಂವಿಧಾನಶಿಲ್ಪಿ ಅಂಬೇಡ್ಕರ ಹಾಗೂ ದೇಶದ ರಾಷ್ಟ್ರೀಯ ನಾಯಕರ ಪ್ರತಿಮೆಗಳ ಮೇಲೆ ಮೇಲಿಂದ ಮೇಲೆ ಅವಮಾನ ಮಾಡಲಾಗುತ್ತಿದೆ. ಇದರಿಂದ ಅವರ ಅನುಯಾಯಿಗಳಿಗೆ ನೋವು ಉಂಟಾಗುತ್ತಿದ್ದು, ಇದರಿಂದಾಗಿ ದೇಶದ ನಾಗರಿಕ ಸಮಾಜ ತಲೆ ತಗ್ಗಿಸುವಂತಾಗುತ್ತಿದೆ. ಕೂಡಲೇ ಈ ಕೃತ್ಯ ಎಸಗಿ ಬಂಧಿತರಾದ ಅಪರಾಧಿಗಳ ಮೇಲೆ ದೇಶದ್ರೋಹಿ ಕಾಯ್ದೆಯಡಿ ಕಠಿಣ ಕ್ರಮ ಕೈಕೊಳ್ಳಬೇಕು. ಇಂತಹ ಪ್ರಕರಣಗಳು ಮರುಕಳಿಸದಂತೆ ಪೊಲೀಸ್ ಹಾಗೂ ಗುಪ್ತಚರ ಇಲಾಖೆಗಳು ಕ್ರಮ ವಹಿಸಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಹುಯೋಗಿ ತಳ್ಳೊಳ್ಳಿ, ಲಕ್ಕಪ್ಪ ಬಡಿಗೇರ, ಬಸವರಾಜ ತಳಕೇರಿ, ಸುಭಾಸ್ ನಾಟೀಕಾರ ಮಾತನಾಡಿದರು.

ರಾವುತ ಮಾಸ್ತರ ತಳಕೇರಿ, ಶಿವು ವಾಲಿಕಾರ, ಶರಣು ನಾಟಿ–ಕಾರ, ರಾಘವೇಂದ್ರ ಗುಡಿಮನಿ, ಶಿವು ಇಂಗಳಗಿ, ಮಡಿವಾಳಪ್ಪ ಹೊಸಮನಿ, ಬಾಬು ಭಾವಿಮನಿ, ಅಪ್ಪು ಮುಲ್ಲಾ, ರಾಘವೇಂದ್ರ ತಳವಾರ, ಪಿಂಟೂ ಭಾಸ್ಕರ್, ಪರಶುರಾಮ ಬಡಿಗೇರ, ಅಶೋಕ ಗುಡಿಸಲಮನಿ, ಸೋನು ತಳವಾರ, ರಾವುತ ಎಸ್.ಟಿ, ಮಾಂತೇಶ ಚಲವಾದಿ, ಚಂದ್ರಕಾಂತ ಗುಡಿಮನಿ ಸೇರಿದಂತೆ ಇತರರು ಇದ್ದರು.

ರಾಜಕೀಯ ಮುಖಂಡರ ಇಚ್ಛಾಶಕ್ತಿಯ ಕೊರತೆ । ಪಾಳುಬಿದ್ದ ಗೋದಾಮಿನಲ್ಲಿ ಕಾರ್ಯನಿರ್ವಹಣೆ

## ವರ್ಷ ಕಳೆದರೂ ಉದ್ಘಾಟನೆ ಭಾಗ್ಯ ಕಾಣದ ರೈತ ಸಂಪರ್ಕ ಕೇಂದ್ರ!


ಉದಯರಶ್ಮಿ ನ್ಯೂಸ್
– ಬಂದೇನವಾಜ್.ಐ.ನಾಲತವಾಡ

ಕೆಂಭಾವಿ: ಸರಕಾರ ಜನಸಾಮಾನ್ಯರ ಒಳಿತಿಗಾಗಿ ತನ್ನ ಅನುದಾನದಿಂದ ಸಾಕಷ್ಟು ಪ್ರಮಾಣದಲ್ಲಿ ಯೋಜನೆಗಳನ್ನು ಬಿಡುಗಡೆ ಮಾಡುತ್ತದೆ. ಆದರೆ ರಾಜ–ಕೀಯ ಮುಖಂಡರ ಇಚ್ಛಾಶಕ್ತಿಯ ಕೊರತೆಯಿಂದ ಕೆಲವು ಯೋಜನೆಗಳು ಹಳ್ಳ ಹಿಡಿದಿವೆ,

ಅದರಂತೆಯೇ ಪಟ್ಟಣದಲ್ಲಿ ಶಾಸಕರ ಇಚ್ಛಾಶಯದಂತೆ ಸುಮಾರು 53 ಲಕ್ಷ ರೂ. ವೆಚ್ಚದಲ್ಲಿ ನೂತನ ರೈತ ಸಂಪರ್ಕ ಕೇಂದ್ರದ ಕಟ್ಟಡ ಕಾಮಗಾರಿ ಮುಗಿದು ವರ್ಷ ಕಳೆದರೂ ಇನ್ನೂ ಉದ್ಘಾಟನೆಯ ಭಾಗ್ಯ ಕಾಣದಂತಾಗಿದೆ. ಇದು ಕ್ಷೇತ್ರದ ಆಡಳಿತಕ್ಕೆ ಹಿಡಿದ ಕೈಗನ್ನಡಿಯಾಗಿದೆ.

ಕಳೆದ ಹಲವು ವರ್ಷಗಳಿಂದ ಪೊಲೀಸ್ ಠಾಣೆ ಹಿಂಬದಿಯ ಪಾಳುಬಿದ್ದ ಕಾಡಾ ವ್ಯಾಪ್ತಿಯ ಗೋದಾಮಿನಲ್ಲಿ ರೈತ ಸಂಪರ್ಕ ಕೇಂದ್ರ ಸಧ್ಯ ಕಾರ್ಯನಿರ್ವಹಿಸುತ್ತಿದ್ದು, ಇನ್ನೂ ಹೆಚ್ಚಿನ ಅನುಕೂಲ ರೈತರಿಗೆ ಆಗಲಿ ಎಂಬ ಕಾರಣದಿಂದ ಸರ್ಕಾರ ಈ ಹೊಸ ರೈತ ಸಂಪರ್ಕ ಕೇಂದ್ರ ನಿರ್ಮಿಸಿದೆ. ಆದರೆ ಈವರೆಗೂ ಈ ಕೇಂದ್ರ ಉದ್ಘಾಟನೆಗೊಳ್ಳದಿರುವುದು ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ.


ಸರ್ಕಾರದಿಂದ ಬಂದ ಯೋಜನೆಗಳಾದ ಗೊಬ್ಬರ ದಾಸ್ತಾನು ಮಾಡಲು ಮತ್ತು ಕಚೇರಿ ನಿರ್ವಹಣೆಗಾಗಿ ಸರ್ಕಾರ ಅನುದಾನ ಒದಗಿಸಿ ರೈತ ಸಂಪರ್ಕ ಕೇಂದ್ರ ನಿರ್ಮಾಣ ಮಾಡಿದೆ. ಈ ಸುಸಜ್ಜಿತ ಕಟ್ಟಡ ಪಾಳು ಬಿದ್ದಿದ್ದು ಯಾವ ಪುರುಷಾರ್ಥ–ಕ್ಕಾಗಿ ಎಂದು ಜನಸಾಮಾನ್ಯರು ಮಾತನಾಡುತ್ತಿದ್ದಾರೆ.



ಪೂರ್ಣಗೊಂಡು ವರ್ಷ ಗತಿಸಿದರೂ ಉದ್ಘಾಟನೆಗೆ ಇಲಾಖೆ ಏಕೆ ನಿರ್ಲಕ್ಷ್ಯ ವಹಿಸುತ್ತಿದೆ ಎಂಬುದು ವಲಯದ ರೈತರಿಗೆ ಯಕ್ಷಪ್ರಶ್ನೆಯಾಗಿ ಕಾಡುತ್ತಿದೆ.

ನೂತನ ಕಟ್ಟಡ ನಿರ್ಮಿಸಿದ ಸ್ಥಳ ಸ್ಮಶಾನ ಭೂಮಿಯಾಗಿದ್ದು, ಅಲ್ಲಿ ಸರ್ಕಾರದ ಜಾಗ (ಗಾಂವಠಾಣ) ಇರುವುದರಿಂದ ಕಟ್ಟಡ ನಿರ್ಮಿಸಲಾಗಿದೆ. ಸ್ಮಶಾನ ಜಾಗದಲ್ಲಿ ಜನರ ಓಡಾಟ ಇರದ ಕಾರಣ ಅದು ಉದ್ಘಾಟನೆಯಾಗಿಲ್ಲ ಎಂಬ ಮಾತು ಒಂದೆಡೆ ಕೇಳಿ ಬರುತ್ತಿದ್ದರೆ ಸುತ್ತಮುತ್ತಲಿನ ಜಾಗ ಖಾಸಗಿ ವ್ಯಕ್ತಿಗಳು ಒತ್ತುವರಿ ಮಾಡಿಕೊಂಡಿದ್ದು, ಅದನ್ನು ಕೃಷಿ ಇಲಾಖೆ ತನ್ನ ಸುಪರ್ದಿಗೆ ಪಡೆದುಕೊಂಡ ನಂತರವೇ ಈ ಕಟ್ಟಡ ಉದ್ಘಾಟನೆಗೆ ಸಮಯ ನಿಗದಿ ಮಾಡುತ್ತದೆ ಎಂಬ ಮಾತು ರೈತ ವಲಯದಲ್ಲಿ ಕೇಳಿ ಬರುತ್ತಿದೆ.

ಒಟ್ಟಾರೆ ಸರ್ಕಾರದ ಹಣ ಖರ್ಚಾಗಿ ಸುಸಜ್ಜಿತ ರೈತರ ಸಂಪರ್ಕ ಕೇಂದ್ರ ನಿರ್ಮಿಸಿದ್ದರೂ ಜನತೆಯ ಉಪಯೋಗಕ್ಕೆ ಬಾರದೆ ಇರುವುದು ಸರಿಯಲ್ಲ. ಹೀಗಾಗಿ ಕೂಡಲೇ ಕಟ್ಟಡ ಲೋಕಾರ್ಪಣೆಗೊಳಿಸಿ ರೈತರಿಗೆ ಅನುಕೂಲ ಕಲ್ಪಿಸಬೇಕೆಂಬುದು ಹಲವು ರೈತರ ಒತ್ತಾಯವಾಗಿದೆ.



“ಸರ್ಕಾರದ ಅನುದಾನದಲ್ಲಿ 53ಲಕ್ಷ ರೂ. ವೆಚ್ಚದಲ್ಲಿ ನೂತನ ರೈತ ಸಂಪರ್ಕ ಕೇಂದ್ರ ಕಟ್ಟಡ ನಿರ್ಮಿಸಿದ್ದಾರೆ, ಆದರೆ ಏನು ಪ್ರಯೋಜನ? ಇನ್ನೂವರೆಗೂ ಉದ್ಘಾಟನೆಯ ಭಾಗ್ಯನೇ ದೊರಕಲಿಲ್ಲ, ಈಗಲಾದರೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಅಧಿಕಾರಿಗಳು ಇತ್ತ ಕಡೆ ಗಮನಹರಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕು”

– ಎಚ್. ಆರ್. ಬಡಿಗೇರ, ರೈತ ಮುಖಂಡರು

# ಶಿಕ್ಷಕ ಲಕ್ಷ್ಮೀಪುತ್ರ ಕಿರನಳ್ಳಿ ಗೆ ಪ್ರಶಸ್ತಿ ಪ್ರದಾನ



**ಉದಯರಶ್ಮಿ ನ್ಯೂಸ್**

ಆಲಮೇಲ: ಪಟ್ಟಣದ ಶ್ರೀ ವಿಶ್ವೇಶ್ವರ ಬಾಲಭಾರತಿ ಅನುದಾನಿತ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರು , ಕರ್ನಾಟಕ ರಾಜ್ಯ ಅನುದಾನಿತ ಶಾಲಾ ಕಾಲೇಜುಗಳ ಪಿಂಚಣಿ ವಂಚಿತ ನೌಕರರ ಸಂಘದ ರಾಜ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಕ್ಷ್ಮೀಪುತ್ರ ಕಿರನಳ್ಳಿ ರವರಿಗೆ 2024 ನೇ ಸಾಲಿನ ಜ್ಯೋತಿಬಾ ಫುಲೆ ಜಿಲ್ಲಾ ಮಟ್ಟದ ಆದರ್ಶ ಶಿಕ್ಷಕ ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಇತ್ತೀಚೆಗೆ ವಿಜಯಪುರದ ಕಂದಗಲ್ ಹನಮಂತ್ರಾಯ ರಂಗಮಂದಿರದಲ್ಲಿ ನಡೆದ ಮಾತೆ ಸಾವಿತ್ರಿಬಾಯಿ ಫುಲೆ ರವರ ಜಯಂತ್ಯೋತ್ಸವ ಸಮಾರಂಭದಲ್ಲಿ ವಿಜಯಪುರ ಮಹಾನಗರ ಪಾಲಿಕೆ ಮಹಾಪೌರ ರಾದ ಮಹೇಜಬಿನ್ ಹೋರ್ತಿ ಪ್ರಶಸ್ತಿ ನೀಡಿ ಗೌರವಿಸಿದರು.

# ಮನಗೂಳಿ ಹಿರೇಮಠದ ಕಾರ್ಯಕ್ರಮಕ್ಕೆ ಗಣ್ಯರಿಗೆ ಆಹ್ವಾನ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಮನಗೂಳಿ ಸಂಸ್ಥಾನ ಹಿರೇಮಠದಲ್ಲಿ ಫೆ.2 ರಿಂದ 4 ರವರೆಗೆ ಹಮ್ಮಿಕೊಂಡಿರುವ ಕಾರ್ಯಕ್ರಮಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ ಅವರನ್ನು ಬೆಂಗಳೂರಿನಲ್ಲಿ ಭೇಟಿಯಾಗಿ ಬುಧವಾರ ಶ್ರೀಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಆಹ್ವಾನ ಪತ್ರಿಕೆ ನೀಡಿ ಆಹ್ವಾನಿಸಿದರು.

ಫೆ.3 ರಂದು ಹಮ್ಮಿಕೊಂಡಿರುವ ಶ್ರೀಮಠದ ಶತಾಯುಷಿ ಸಂಗನಬಸವ ಕಲ್ಯಾಣ ಮಂಟಪ ಲೋಕಾರ್ಪಣೆ, ಉಭಯ ಶ್ರೀಗಳ ಧ್ವನಿ ಸುರುಳಿ ಬಿಡುಗಡೆ ಮತ್ತು ಸಂಗನಬಸವಶ್ರೀ ರಾಜ್ಯಮಟ್ಟದ ಪ್ರದಾನ ಸಮಾರಂಭಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಬುಧವಾರ ಶ್ರೀಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಅವರು ಆಹ್ವಾನ ಪತ್ರಿಕೆ ನೀಡುವ ಸಮಾರಂಭಕ್ಕೆ ಆಹ್ವಾನ ನೀಡಿದರು.

ನಂತರ ಇದೇ ಸಮಾರಂಭಕ್ಕೆ ಸಚಿವರಾದ ಎಚ್. ಕೆ. ಪಾಟೀಲ, ಶಿವಾನಂದ ಪಾಟೀಲ, ಮಾಜಿ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಅವರಿಗೂ ಆಹ್ವಾನ ಪತ್ರಿಕೆ ನೀಡಿ ಆಹ್ವಾನ ನೀಡಿದರು.ಫೆ,4 ರಂದು ಹಮ್ಮಿಕೊಂಡಿರುವ ಡಾ.ಮಹಾಂತ ಶಿವಾಚಾರ್ಯರ 11 ನೇ ಪುಣ್ಯಾರಾಧನೆ, ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಅವರ ಪಟ್ಟಾಧಿಕಾರದ ದಶಮಾನೋತ್ಸವ, ಉಚಿತ ಸಾಮೂಹಿಕ ವಿವಾಹ ಮತ್ತು ನೂತನ ರಥೋತ್ಸವ ಲೋಕಾರ್ಪಣೆ ಸಮಾರಂಭಕ್ಕೆ ರಾಜ್ಯ ಬಿಜೆಪಿ ಅಧ್ಯಕ್ಷ ಬಿ. ವೈ. ವಿಜಯೇಂದ್ರ ಅವರನ್ನು ಭೇಟಿಯಾಗಿ ಆಹ್ವಾನ ನೀಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿಯ ಮಾಜಿ ಅಧ್ಯಕ್ಷ, ವ್ಹಿಡಿಸಿಸಿ ಬ್ಯಾಂಕಿನ ನಿರ್ದೇಶಕ ಚಂದ್ರಶೇಖರ ಗೌಡ ಪಾಟೀಲ, ರಾಮು ಬಿರಾದಾರ, ಮಾಂತೇಶ ಮನಗೂಳಿ, ಭೀಮಣ್ಣ ಬಸ್ನೂರ, ಸಿದ್ದು ಬಿರಾದಾರ, ಶ್ರೀಶೈಲ ಮನಗೂಳಿ ಇದ್ದರು.

# ಬ್ಯಾಂಕ್ ಕಟ್ಟಡ ನಿರ್ಮಾಣಕ್ಕೆ ರೂ.10ಲಕ್ಷ ಅನುದಾನ :ಶಾಸಕ ಮನಗೂಳಿ



**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ನಾನು ಒಬ್ಬ ಸಹಕಾರಿಯಾಗಿ ಗುಬ್ಬೇವಾಡ ಪಿಕೆಪಿಎಸ್ ಬ್ಯಾಂಕ್ ಕಟ್ಟಡ ನಿರ್ಮಾಣಕ್ಕೆ ಹತ್ತು ಲಕ್ಷ ರೂ. ಅನುದಾನ ನೀಡುವುದಾಗಿ ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ತಾಲೂಕಿನ ಗುಬ್ಬೇವಾಡ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗೆ ಮಂಗಳವಾರ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಗುಬ್ಬೇವಾಡ ಪಿಕೆಪಿಎಸ್ ಬ್ಯಾಂಕ್ ಕೆಲವೇ ದಿನಗಳಲ್ಲಿ ಹೆಮ್ಮರವಾಗಿ ಬೆಳೆದು ನಿಂತಿ-ದ್ದು,ನನಗೆ ಸಂತಸವಾಗಿದೆ ಎಂದರು.

ಗ್ರಾಮದ ಅಡಿವೇಶ್ವರ ಮಠದ ಅಡಿವೇಶ್ವರ ಸ್ವಾಮೀಜಿ, ಅಮೋಘಸಿದ್ದೇಶ್ವರ ಮಠದ ಕನ್ನಯ್ಯ ಮಹಾರಾಜರು ಸಾನ್ನಿಧ್ಯ ವಹಿಸಿದ್ದರು. ಬ್ಯಾಂಕ್ ಅಧ್ಯಕ್ಷ ಎಸ್. ವಾಯ್.ಕೊಂಡಗೂಳಿ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ನಿಂಗಪ್ಪ ನಾಯ್ಕೋಡಿ,ಗ್ರಾಪಂ ಅಧ್ಯಕ್ಷರ ಪ್ರತಿನಿಧಿ ನಿತ್ಯಾನಂದ ಕಟ್ಟಿಮನಿ, ಉಪಾಧ್ಯಕ್ಷ ಮಹಾಂತೇಶ ಮಳ್ಳಿ, ವಿಡಿಸಿಸಿ ತಾಲೂಕು ನೋಡಲ್ ಅಧಿಕಾರಿ ಎನ್.ಜಿ.ಜನಿವಾರ, ಸಿಂದಗಿ ವಿಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ಎ.ಎಸ್.ಕಲಶೆಟ್ಟಿ, ವಿಡಿಸಿಸಿ ಕ್ಷೇತ್ರಾಧಿಕಾರಿ ಎಸ್. ವಾಯ್.ಎಂಟಮಾನ ಸೇ-ರಿದಂತೆ ಯೋಗೇಶ ಕರ್ನಾಳ ಮತ್ತಿತ್ತರಿದ್ದರು. ಬ್ಯಾಂಕ್ ಸಿಇಒ ರಮೇಶ ಇಜೇರಿ ಪ್ರಾಸ್ತಾವಿಕ ಮಾತನಾಡಿದರು. ಮುತ್ತು ಪಾಟೀಲ ಸ್ವಾಗತಿಸಿದರು. ದೇವಿಂದ್ರ ಬಡಿಗೇರ ನಿರೂಪಿಸಿದರು. ಕಾಂಗ್ರೆಸ್ ಯುವ ಮುಖಂಡ ಸದ್ದಾಮುಪಟೇಲ ಬಿರಾದಾರ ವಂದಿಸಿದರು.

# ತಾಲೂಕಾಡಳಿತದಿಂದ ಡಬ್ಬಾ ಅಂಗಡಿಗಳ ತೆರವು



**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಅನಧಿಕೃತವಾಗಿ ಡಬ್ಬಾ ಅಂಗಡಿ ಇಟ್ಟುಕೊಂಡು ವ್ಯಾಪಾರ ನಡೆಸುತ್ತಿದ್ದ ವ್ಯಾಪಾರಸ್ಥರಿಗೆ ಗುರುವಾರ ಬೆಳ್ಳಂಬೆಳಿಗ್ಗೆ ತಾಲೂಕು ಆಡಳಿತ ಶಾಕ್ ನೀಡಿತು.

ಇಲ್ಲಿನ ತಹಶೀಲ್ದಾರ ಕಚೇರಿಯ ಬಳಿ ಮತ್ತು ಬಸವೇಶ್ವರ ವೃತ್ತದ ಬಳಿ ಸರ್ಕಾರಿ ಜಾಗೆಯಲ್ಲಿದ್ದ ಅಂಗಡಿ ಮುಂಗಟ್ಟುಗಳ ತೆರವು ಕಾರ್ಯಾಚರಣೆ ನಡೆಸಿ ಸಫಲವಾಯಿತು.

ಈ ಮೊದಲು ತೆರವುಗೊಳಿಸಿ ಕೊಳ್ಳುವಂತೆ ತಹಶೀಲ್ದಾರ ಬಲರಾಮ ಕಟ್ಟಿಮನಿ ಖಡಕ್ ಸೂಚನೆ ನೀಡಿದ್ದರು. ವ್ಯಾಪಾರಿಗಳು ತಮ್ಮ ಅಂಗಡಿಗಳನ್ನ ತೆರುವುಗೊಳಿಸಿಕೊಳ್ಳುವದಾಗಿ ಕೆಲ ದಿನಗಳ ಅವಕಾಶವನ್ನು ಬೇಡಿದ್ದರು. ಮಾನವೀಯತೆಯ ಆಧಾರದ ಮೇಲೆ ತಹಶೀಲ್ದಾರ ಜ.24 ರವರೆಗೆ ಗಡುವು ನೀಡಿದ್ದರು. ಗಡುವಿನ ಅಂತಿಮ ದಿನದಂದು ಯಾವುದೇ ಅಂಗಡಿಕಾರರು ಸ್ವಯಂ ಪ್ರೇ-ರಿತರಾಗಿ ತಮ್ಮ ಅಂಗಡಿಗಳನ್ನು ತೆರವುಗೊಳಿಸದ ಹಿನ್ನೆಲೆ ಅಟೋ ರಿಕ್ಷಾ ಮೂಲಕ ಬಹಿರಂಗವಾಗಿ ತೆರವುಗೊಳಿಸಿಕೊಳ್ಳುವಂತೆ ಪ್ರಕಟಣೆ ಹೊರಡಿಸಿದ್ದರು. ಇಷ್ಟಾದರೂ ವ್ಯಾಪಾರಸ್ಥರು ಮಾತ್ರ ತೆರುವಿಗೆ ಮುಂದಾಗದೇ ನ್ಯಾಯಾಲಯದ ಮೊರೆ ಹೋಗಿದ್ದರು.

ಗುರುವಾರ ಬೆಳ್ಳಂಬೆಳಿಗ್ಗೆ 6 ಗಂಟೆಗೆ ತಹಶೀಲ್ದಾರ ಬಲರಾಮ ಕಟ್ಟಿಮನಿ, ಪುರಸಭೆ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ, ಪಿಎಸ್ಐ ಸಂಜೀವ ತಿಪರೆಡ್ಡಿ, ತಾಳಿಕೋಟೆ ಪಿಎಸ್ಐ ರಾಮನಗೌಡ ಸಂಕನಾಳ ಸೇರಿದಂತೆ 60 ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಗಳೊಂದಿಗೆ ಗುರುವಾರ ಕಾರ್ಯಾಚರಣೆಗೆ ಇಳಿದು ಎಲ್ಲ ಅಂಗಡಿಗಳನ್ನು ತೆರವುಗೊಳಿಸಿದ್ದಾರೆ.

ಅನಧಿಕೃತವಾಗಿ ರಸ್ತೆ, ಜಾಗೆಗಳನ್ನ ಅತಿಕ್ರಮಿಸಿಕೊಂಡವರ ತೆರವು ಕಾರ್ಯಾಚರಣೆಯಲ್ಲಿ ಟೊಂಕ ಕಟ್ಟಿ ನಿಂತ ತಹಶೀಲ್ದಾರ ಕಾರ್ಯಕ್ಕೆ ಪಟ್ಟಣದ ಸೌಂದರ್ಯ, ಪಾರ್ಕಿಂ-ಗ್ ಮತ್ತು ಸ್ವಚ್ಛತೆ ಬಯಸುವವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

> ಅನಧಿಕೃತ ಡಬ್ಬಾ ಅಂಗಡಿಗಳನ್ನು ತೆರವುಗೊಳಿಸಲು ನಮಗೆ ಆದೇಶ ಇದೆ. ಹಲವಾರು ಬಾರಿ ತೆರವುಗೊಳಿಕೊಳ್ಳಲು ಅವಕಾಶ ನೀಡಿದ್ದೆವು. ಜ.24 ರವರೆಗೆ ಅಂಗಡಿಕಾರರು ಬಂದು ಗಡುವು ಕಪಡೆದು ಹೋಗಿದ್ದರು. ಆದರೆ ತೆರವುಗೊಳಿಸಿಕೊಳ್ಳಲಿಲ್ಲ. ಹಾಗಾಗಿ ಅನಿವಾರ್ಯವಾಗಿ ಮೇಲಾಧಿಕಾರಿಗಳ ಆದೇಶವನ್ನು ಪಾಲನೆ ಮಾಡಿದ್ದೇನೆ.
>
> **– ಬಲರಾಮ ಕಟ್ಟಿಮನಿ ತಹಶೀಲ್ದಾರ**

## ತಹಶೀಲ್ದಾರ ಖಡಕ್ ವಾರ್ನ್

**ಕಾರ್ಯಾಚರಣೆ ವೇಳೆ ಉದಯರಶ್ಮಿ ಪತ್ರಿಕೆಯೊಂದಿಗೆ ಮಾತನಾಡಿದ ತಹಶೀಲ್ದಾರ ಈ ಕಾರ್ಯಾಚರಣೆ ನಿರಂತರವಾಗಿರಲಿದೆ. ತಹಶೀಲ್ದಾರ ಕಚೇರಿ ಮತ್ತು ಬಸವೇಶ್ವರ ವೃತ್ತಗಳಲ್ಲಿ ಮಾತ್ರವಲ್ಲದೇ ಪಟ್ಟಣದ ಪೊಲೀಸ್ ಠಾಣೆಯಿಂದ ಹಿಡಿದು ತಾಳಿಕೋಟೆ ರಸ್ತೆ, ಆಲಮಟ್ಟಿ ರಸ್ತೆ, ತಂಗಡಗಿ ರಸ್ತೆ, ಮುಖ್ಯ ಬಜಾರ, ಬಸ್ ನಿಲ್ದಾಣದ ಹತ್ತಿರ, ಕೃಷಿ ಇಲಾಖೆ ಮತ್ತು ಪುರಸಭೆ ಬಳಿ ಹೀಗೆ ಎಲ್ಲಂದರಲ್ಲಿ ಅನಧಿಕೃತವಾಗಿ ಡಬ್ಬಾ ಅಂಗಡಿಗಳನ್ನಿಟ್ಟು ವ್ಯಾಪಾರ ಮಾಡುತ್ತಿದ್ದವರು ಈ ಕೂಡಲೇ ಸ್ವಯಂ ಪ್ರೇರಿತವಾಗಿ ತಮ್ಮ ಅಂಗಡಿಗಳನ್ನು ತೆರವುಗೊಳಿಸಿಕೊಳ್ಳಬೇಕು. ನಾವು ಜೆಸಿಬಿ ತೆಗೆದುಕೊಂಡು ಬಂದಾಗ ನಮ್ಮ ಅಮೂಲ್ಯವಾದ ವಸ್ತುಗಳಿವೆ ಕೆಲ ಕಾಲ ಕಾಲಾವಕಾಶ ನೀಡಿ ಎಂದರೆ ನಾವು ಯಾವುದೇ ಸಮಯ ನೀಡುವದಿಲ್ಲ. ಈಗಾಗಲೇ ಸಾಕಷ್ಟು ಕಾಲಾವಕಾಶ ನೀಡಿದ್ದೇವೆ. ಮಾಧ್ಯಮದ ಮೂಲಕ ಮತ್ತೊಮ್ಮೆ ಹೇಳುತ್ತೇನೆ, ಈ ಕೂಡಲೇ ಸ್ವಯಂ ಪ್ರೇರಿತರಾಗಿ ಅನಧಿಕೃತ ಡಬ್ಬಾ ಅಂಗಡಿಕಾರರು ತಮ್ಮ ಅಂಗಡಿಗಳನ್ನು ತೆರವುಗೊಳಿಸಿಕೊಳ್ಳಬೇಕು. ಇಲ್ದಿದ್ರೆ ಮುಂದಾಗುವ ನಷ್ಟಕ್ಕೆ ನಾವು ಜವಾಬ್ದಾರರಲ್ಲ ಎಂದಿದ್ದಾರೆ.**

# ಭಾರತದ ಭವಿಷ್ಯ ವಿದ್ಯಾವಂತರ ಕೈಯಲ್ಲಿ :ಶ್ರೀಕಾಂತ



**ಉದಯರಶ್ಮಿ ನ್ಯೂಸ್**

ಇಂಡಿ: ಪ್ರತಿಯೊಬ್ಬರು ಶಿಕ್ಷಣದ ಬಗ್ಗೆ ಗೌರವ ಬೆಳೆಸಿಕೊಳ್ಳಬೇಕು.ವಿದ್ಯೆ ವಿದ್ಯಾರ್ಥಿಗಳ ಜೀವನ ಬೆಳಗುವ ಕಣ್ಣು, ಕಾರಣ ಭಾರತದ ಭವಿಷ್ಯ ವಿದ್ಯಾವಂತರ ಕೈಯಲ್ಲಿ ಇದೆ ಎಂದು ಪುರಸಭೆ ಮಾಜಿ ಅಧ್ಯಕ್ಷ ಶ್ರೀಕಾಂತ ಕುಡಿಗನೂರ ಹೇಳಿದರು.

ಪಟ್ಟಣದ ಕರ್ನಾಟಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕಲಿಕಾ ಉಪಕರಣಗಳ ಪ್ರದರ್ಶನ, ಆಹಾರ ಹಬ್ಬ, ರಂಗೋಲಿ ಸ್ಪರ್ಧೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಂಸ್ಥೆಯ ಉಪಾಧ್ಯಕ್ಷ ಸಂಗಣ್ಣ ಇರಾಬಟ್ಟಿ ಮಾತನಾಡಿ, ಇಂದು ನಮ್ಮ ಯುವಕ ಯುವತಿಯರು ವಿಜ್ಞಾನ, ಕ್ರೀಡೆ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಮುಂದಿದ್ದು ಜಗತ್ತು ನಮ್ಮ ಯುವಕರ ಕಾರ್ಯ ಪ್ರಶಂಸಿಸುತ್ತಿದ್ದಾರೆ ಎಂದರು.

ಸಂಸ್ಥೆಯ ಕಾರ್ಯದರ್ಶಿ ಪಿ.ಬಿ.ಕತ್ತಿ,ಪ್ರಾಚಾರ್ಯ ಸುಧಾ ಸುಣಗಾರ, ಮುಖ್ಯ ಗುರು ರಾಜ-ಕುಮಾರ ಪಾಟೀಲ ವಿದ್ಯಾರ್ಥಿಗಳ ಸ್ಪರ್ಧೆ ಕುರಿತು ಮಾತನಾಡಿದರು.

ಡಿ.ಎಸ್.ಮಠಪತಿ, ಸಿ.ಎಸ್. ಪೂಜಾರಿ, ಎಂ.ಎಂ.ಪೊದ್ದಾರ, ಸಂಗೀತಾ ಉಟಗಿ, ಸುರೇಖಾ ಭೈರಶೆಟ್ಟಿ, ಶೃತಿ ಬಿರಾದಾರ, ರೇಣುಕಾ ಗೊಟಗಿ, ಕಮರುನ್ನಿಸಾ ಕೊಟ್ನಾಳ ಮತ್ತಿತರಿದ್ದರು.

# ಸಂವಿಧಾನ ಜಾಗೃತಿ ಸ್ತಬ್ಧಚಿತ್ರ ಯಾತ್ರೆ : ಪೂರ್ವಭಾವಿ ಸಭೆ



**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಕರ್ನಾಟಕ ಸಂಭ್ರಮ ಜ್ಯೋತಿ ರಥಯಾತ್ರೆ ಹಾಗೂ ಸಂವಿಧಾನ ಜಾಗೃತಿ ಸ್ತಬ್ಧಚಿತ್ರ ಯಾತ್ರೆಗೆ ಗೌರವಯುತವಾಗಿ ಶಿಷ್ಟಾಚಾರದೊಂದಿಗೆ ಸ್ವಾಗತಿಸೋಣ ಎಂದು ತಹಶೀಲ್ದಾರ ಪ್ರಕಾಶ ಸಿಂದಗಿ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ಜರುಗಿದ ಕರ್ನಾಟಕ ಸಂಭ್ರಮ ಜ್ಯೋತಿ ರಥಯಾತ್ರೆ ಹಾಗೂ ಸಂವಿಧಾನ ಜಾಗೃತಿ ಸ್ತಬ್ಧಚಿತ್ರ ಸಂಚಾರದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಥ ಯಾತ್ರೆ ಹಾಗೂ ಸಂವಿಧಾನ ಜಾಗೃತಿ ಸ್ತಬ್ಧಚಿತ್ರಗಳೆರಡೂ ಅತ್ಯಂತ ಮಹತ್ವ ಸಾರಿ ಹೇಳುವ ಯಾತ್ರೆಗಳಾಗಿವೆ. ಇವುಗಳನ್ನು ತಾಲ್ಲೂಕಿನಲ್ಲಿ ಎಲ್ಲ ಸಂಘ, ಸಂಸ್ಥೆ, ಸಂಘಟನೆಗಳ ಉಪಸ್ಥಿತಿಯಲ್ಲಿ ಅಧಿಕಾರಿಗಳು, ವಿದ್ಯಾರ್ಥಿಗಳು, ಜನಪ್ರತಿನಿಧಿಗಳು ಹಾಗೂ ಮುಖ್ಯವಾಗಿ ಸಾರ್ವಜನಿಕರು ಪಾಲ್ಗೊಂಡು ಸ್ವಾಗತಿಸಿ, ಬಿಳ್ಕೋಡೋಣ ಎಂದರು.

ತಾಲ್ಲೂಕು ಪಂಚಾಯಿತಿ ಇಓ ಭಾರತಿ ಚೆಲುವಯ್ಯ, ಕಸಾಪ ತಾಲ್ಲೂಕು ಅಧ್ಯಕ್ಷ ಜಿ.ಪಿ.ಬಿರಾದಾರ, ಶರಣ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಎಸ್.ಎನ್.ಬಸವರೆಡ್ಡಿ, ತಾಲ್ಲೂಕು ನೋಡಲ್ ಅಧಿಕಾರಿ ಬಿ.ಎಲ್.ಜುಮನಾಳ, ಮಾತನಾಡಿ, ಎರಡು ಯಾತ್ರೆ, ಕಾರ್ಯಕ್ರಮಗಳ ತಯಾರಿ, ರೂಪುರೇಷೆಗಳ ಕುರಿತು ಮಾತನಾಡಿದರು.

ದಲಿತ ಸಂಘರ್ಷ ಸಮಿತಿಯ ವಿಭಾಗೀಯ ಸಂಚಾಲಕ ರಾವುತ ತಳಕೇರಿ, ಪ್ರಕಾಶ ಗುಡಿಮನಿ, ರಾಜ-ಕುಮಾರ ಸಿಂದಗೇರಿ, ಹುಯೋಗಿ ತಳ್ಳೊಳ್ಳಿ, ರಾವುತಮಾಸ್ತರ ತಳಕೇರಿ, ಬಸವರಾಜ ತಳಕೇರಿ, ಮಾತನಾಡಿ, ಸಭೆಗೆ ಕೆಲವು ಇಲಾಖೆಗಳ ಮುಖ್ಯಸ್ಥರು ಸತತವಾಗಿ ಗೈರಾಗುತ್ತಿದ್ದಾರೆ ಎಂದು ತಮ್ಮ ಅಭಿಪ್ರಾಯದೊಂದಿಗೆ ಅಸಮಾಧಾನ ವ್ಯಕ್ತಪಡಿಸಿದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಲ್.ಡಿ.ಮುಲ್ಲಾ, ಜಿಲ್ಲಾ ನೋಡಲ್ ಅಧಿಕಾರಿ ಚಂದ್ರಕಾಂತ ಪವಾರ, ಪಿಎಸ್ಐ ಬಸವರಾಜ ತಿಪ್ಪಾರೆಡ್ಡಿ, ಸಿಆರ್‌ಪಿ ವ್ಹಿ.ಎನ್.ನವಲಿ, ಸಮಾಜಕಲ್ಯಾಣ ಇಲಾಖೆಯ ಎಸ್.ಬಿ.ಹಚಡದ, ಪಿಡಿಓಗಳಾದ ಶಾಂತಗೌಡ ನ್ಯಾಮಣ್ಣವರ, ಕೆ.ಎಸ್.ಕಡಕಭಾವಿ, ಎಮ್.ಎನ್.ಕತ್ತಿ, ಬಿ.ಎಚ್.ಗಾವುಡೆ, ಚನ್ನಪ್ಪ ಮಲಾಬಾದ, ಮಲ್ಲು ಮಸಳಿ, ಕಿರಿಯ ಆರೋಗ್ಯ ನಿರೀಕ್ಷಕ ಫಿರೋಜ್ ಮುಲ್ಲಾ, ಬಸಮ್ಮ ಭಾಟಿ ಸೇರಿದಂತೆ ವಿವಿಧ ಇಲಾಖೆಗಳ ಸಿಬ್ಬಂದಿ ಇದ್ದರು.

# ಕೊಂಗನಳ್ಳಿಗೆ ನಿಗಮ ಮಂಡಳಿ ಸ್ಥಾನ ಕೊಡಲು ಆಗ್ರಹ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಕಾಂಗ್ರೆಸ್ ಪಕ್ಷದ ಸಕ್ರಿಯ ಕಾರ್ಯಕರ್ತರಾಗಿ ಪಕ್ಷದ ಸಂಘಟಕರಾಗಿ ಹಲವಾರು ವರ್ಷಗಳಿಂದ ಪಕ್ಷಕ್ಕಾಗಿ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಉತ್ತರ ಕರ್ನಾಟಕದ ವಿಶೇಷ ರಾಜ-ಕಾರಣಿಯಾಗಿರುವ ಜಮಖಂಡಿಯ ನಜೀರ ಕೊಂಗನಳ್ಳಿ ಅವರಿಗೆ ನಿಗಮ ಮಂಡಳಿಯಲ್ಲಿ ಸ್ಥಾನವನ್ನು ನೀಡಬೇಕೆಂದು ನಜೀರ ಕೊಂಗನಳ್ಳಿ ಅಭಿಮಾನಿ ಬಳಗದ ಸದಸ್ಯರಾದ ಪಯಾಜಅಹ್ಮದ ತಂಬದ, ಲಾಲಾಸಾಬ ಚಳ್ಳಿಗಿಡದ, ಅಲಿ ಹುಬ್ಬಳ್ಳಿ, ಅಬ್ದುಲ್ ಬಾಗವಾನ ಶೇಖ್ ಚಳ್ಳಿಗಿಡದ ಅವರು ಕಾಂಗ್ರೆಸ್ ವರಿಷ್ಠರಿಗೆ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ನಜೀರ ಕೊಂಗನಳ್ಳಿ ಅವರು ಈಗಾಗಲೇ ಕರ್ನಾಟಕ ರಾಜ್ಯ ಜವಳಿ ಮತ್ತು ಮೂಲಭೂತ ಸೌಕರ್ಯದ ಉಪಾಧ್ಯಕ್ಷರಾಗಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದಾರೆ. ಇವರೊಬ್ಬ ಸಜ್ಜನ ರಾಜಕಾರಣಿಯಾಗಿದ್ದಾರೆ. ಇವರ ಸೇವೆಯನ್ನು ಗುರುತಿಸಿ ನಿಗಮ ಮಂಡಳಿಯ ರಚನೆಯಲ್ಲಿ ಇವರಿಗೆ ಸ್ಥಾನಮಾನ ನೀಡುವಂತೆ ಕಾಂಗ್ರೆಸ್ ವರಿಷ್ಠರಿಗೆ ಮನವಿ ಮಾಡಿಕೊಂಡಿದ್ದಾರೆ.

# ಜ.29 ರಂದು ವಿದ್ಯುತ್ ವ್ಯತ್ಯಯ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕಿನ ಕೊಳೂರ ಗ್ರಾಮದಲ್ಲಿ ಹೊಸದಾಗಿ ನಿರ್ಮಾಣವಾಗುತ್ತಿರುವ 110/11ಕೆವಿ ಉಪಕೇಂದ್ರಕ್ಕೆ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಹಿರೇಮುರಾಳ 110ಕೆವಿ ಉಪಕೇಂದ್ರದಿಂದ ವಿದ್ಯುತ್ ಸರಬರಾಜು ಹೊಂದುವ ಎಲ್ಲ ಪಂಪಸೆಟ್ ಹಾಗೂ ನಿರಂತರ ಜ್ಯೋತಿ ಮಾರ್ಗಗಳಿಗೆ ಜ.29 ರಂದು ಬೆಳಿಗ್ಗೆ 7ಗಂಟೆಯಿಂದ 10ರವರೆಗೆ ವಿದ್ಯುತ್ ಪೂರೈಕೆ ಇರುವದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

### ಆಲಮಟ್ಟಿಯಲ್ಲಿ ಎಸ್ಸೆಸ್ಸೆಲ್ಸಿ ಮಕ್ಕಳೊಂದಿಗೆ ಸಂವಾದದಲ್ಲಿ ಡಿಡಿಪಿಐ ನಾಗೂರ ಅಭಿಮತ

# ಮಕ್ಕಳು ಪುಸ್ತಕದ ಸಾಂಗತ್ಯ ಬೆಳೆಸಿಕೊಳ್ಳಬೇಕು

**ಉದಯರಶ್ಮಿ ನ್ಯೂಸ್**



ಆಲಮಟ್ಟಿ: ಪಠ್ಯ ಪುಸ್ತಕದ ಸಾಂಗತ್ಯದಲ್ಲಿ ಮಕ್ಕಳು ಪ್ರೀತಿ ಅದರದಿಂದ ಬೆರೆತರೆ ಖಂಡಿತ ಭವಿಷ್ಯತ್ತಿನ ಜೀವನದಲ್ಲಿ ಜೀವನೋಲ್ಲಾಸ ಕಾಣಬಹುದು ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎನ್.ಎಚ್.ನಾಗೂರ ಅಭಿಪ್ರಾಯಿಸಿದರು.

ಸ್ಥಳೀಯ ಎಸ್.ವಿ.ವಿ.ಸಂಸ್ಥೆಯ ಮಂಜಪ್ಪ ಹರ್ಡೇಕರ ಸ್ಮಾರಕ ಸಂಯುಕ್ತ ಪದವಿಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಶಾಲೆಗೆ ಗುರುವಾರ ಭೇಟಿ ನೀಡಿ ಎಸ್ಸೆಸ್ಸೆಲ್ಸಿ ಮಕ್ಕಳೊಂದಿಗೆ ನಡೆಸಿದ ಸಂವಾದದಲ್ಲಿ ಅವರು ಮಾತನಾಡಿದರು.

ಪರೀಕ್ಷೆಗಳು ಸಮೀಪಿಸುತ್ತಿವೆ. ಮಕ್ಕಳು ಓದು,ಬರಹದೆಡೆಗೆ ಹೆಚ್ಚು ಗಮನ ಹರಿಸಬೇಕು. ಕಲಿಕೆಯಲ್ಲಿ ಪರಿಪೂರ್ಣತೆ ಇಲ್ಲದಿದ್ದರೆ ಅಥವಾ ಪ್ರಶ್ನೋತ್ತರ ಕೊರತೆಯು ಕಾಡುತ್ತಿದ್ದರೆ ಅದನ್ನು ಶ್ರಮಪಟ್ಟು ಸರಿದೂಗಿಸಿಕೊಳ್ಳಬೇಕು. ಅನ್ಯ ಸಂಗತಿಗಳಿಗೆ ತಲೆ ಕೆಡಿಸಿಕೊಳ್ಳದೇ ಅದ್ಯಯನಾಸಕ್ತಿ ಬೆಳೆಸಿಕೊಳ್ಳಬೇಕು. ಪುಸ್ತಕ ಪ್ರೇಮ, ಬರಹದ ಒಡನಾಟ ತಮ್ಮನ್ನು ಉನ್ನತಿಯೆಡೆಗೆ ಕೊಂಡೊಯ್ಯುತ್ತದೆ. ನಾಗರಿಕ ಸಮಾಜದಲ್ಲಿ ತಮ್ಮ ಪ್ರತಿಬಿಂಬದ ಛಾಯೆ ಸೊಗಸಾಗಿ ತೋರ್ಪಡಿಸುತ್ತದೆ ಎಂದರು.

ಕಲಿಕೆಯಲ್ಲಿ ಏರುಪೇರು ಎದುರಿಸುತ್ತಿರುವ ವಿದ್ಯಾರ್ಥಿಗಳಿಗೆ ಹಾಗೂ ಪ್ರಶ್ನೋತ್ತರ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ. ಯಾವ ಪಠ್ಯ ವಿಷಯದಲ್ಲಿ ಸಮರ್ಪಕವಾಗಿ ಪ್ರಶ್ನೆಗಳಿಗೆ ಉತ್ತರಿಸಲು ಸಾಧ್ಯವಾಗುತ್ತಿಲ್ಲವೊ ಅದರತ್ತ ಚಿತ್ತ ಹರಿಸಬೇಕು. ಎಷ್ಟು ಶ್ರಮಿಸುತ್ತಿರೊ ಅಷ್ಟು ತಮಗೆ ಪ್ರಯೋಜನ. ಫಲಿತಾಂಶ ಹೆಚ್ಚಳಕ್ಕೂ ಅನುಕೂಲ. ಶ್ರಮಕ್ಕೆ ತಕ್ಕಂತೆ ಪ್ರತಿಫಲನ ಲಭಿಸುತ್ತದೆ. ಏಕಾಗ್ರತೆ, ಆತ್ಮವಿಶ್ವಾಸದಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ಸನ್ನದರಾಗಿ. ಇದು ನನ್ನ ಏಳಿಗೆ, ನನ್ನ ಪ್ರಗತಿ,ನನ್ನ ಜ್ಞಾನ ಎಂದು ನಿಮ್ಮ ಸಾಮರ್ಥ್ಯ ಓರೆಗಲ್ಲಿಗೆ ಹಚ್ಚಿ. ನಾನು ಬೆಳೆಯಬೇಕು, ಶಿಕ್ಷಣ ರಂಗದಲ್ಲಿ ವಿಶೇಷ ಪ್ರಗತಿ ಕಾಣಬೇಕು. ಓದುಬರಹದ ಫೀಲ್ ಮಾಡಿಕೊಂಡರೆ ಯಶಸ್ಸು ತಮ್ಮದು. ಸ್ಪಷ್ಟ ಓದು, ಬರಹದ ಪ್ರಭುತ್ವತೆಯೇ ಶೈಕ್ಷಣಿಕ ಪ್ರಗತಿಗೆ ಕಾರಣ. ಒಳ್ಳೆಯ ವಿಚಾರ, ಉತ್ತಮ ಸಂಗ ಶ್ರೇಯಸ್ಸಿಗೆ ಪೂರಕವಾಗಿವೆ. ಮೌಲ್ಯಾಧಾರಿತ ವ್ಯಕ್ತಿತ್ವ ರೂಪಿಸಿಕೊಂಡು ಪಾಲಕ, ಪೋಷಕ, ಸಮಾಜದ ಋಣಭಾರ ಯುವಜನತೆ ತೀರಿಸಲು ಮುಂದಾಗಬೇಕು ಎಂದು ಡಿಡಿಪಿಐ ಎನ್.ಎಚ್.ನಾಗೂರ ಹೇಳಿದರು.

ಪುಸ್ತಕ ಒಪ್ಪಬೇಕು ಬರಹ ಮೆಚ್ಚಬೇಕು.! ಮಕ್ಕಳು ಜ್ಞಾನದ ಜೊತೆಗೆ ಬರಹ ಕೌಶಲ್ಯ ಮೈಗೂಡಿಸಿಕೊಳ್ಳುವುದು ಇಂದಿನ ಅತ್ಯಗತ್ಯ. ಕಲಿಕೆಗೆ ಸಮರ್ಥವಾಗಿ ಪರಿಹಾರ ಕಂಡುಕೊಳ್ಳಬೇಕು. ಪುಸ್ತಕ ಒಪ್ಪಿಕೊಂಡು ಬರಹವನ್ನು ಮೆಚ್ಚಿಕೊಂಡು ಬರೆಯುವ ಹವ್ಯಾಸ ಮಕ್ಕಳಲ್ಲಿ ಮೂಡಬೇಕು. ಶೈಕ್ಷಣಿಕ ಭವ್ಯತೆಗೆ ಶಿಕ್ಷಕರ ನವ್ಯತೆಯ ಬೋಧನೆ ಮಾರ್ಗದರ್ಶನವಾಗಲಿ. ಎಸ್ಸೆಸ್ಸೆಲ್ಸಿ ಮೆಟ್ಟಿಲನ್ನು ಸರಾಗವಾಗಿ ಮಕ್ಕಳು ಮೆಟ್ಟಲಿ ಎಂಬುದೇ ಇಲಾಖೆಯ ಉದ್ದೇಶ. ವೃತ್ತಿಪರ ಕಲಿಕಾಂಶ ಸಾಮರ್ಥ್ಯ ಗುರುಗಳು ಬೆಳೆಸಿಕೊಳ್ಳಬೇಕು. ಮಕ್ಕಳಿಗೆ ಆಸಕ್ತಿದಾಯಕ ಕಲಿಕೆಗೆ ಉತ್ತೇಜಿಸಿ ಕಲಿಕಾ ಸ್ನೇಹಿ ವಾತಾವರಣ ನಿರ್ಮಿಸಬೇಕು. ಮಕ್ಕಳಲ್ಲಿ ಪರಿಣಾಮಕಾರಿ ಕಲಿಕೆ ಉಂಟು ಮಾಡಲು ತಮ್ಮ ಜ್ಞಾನದ ಮಕರಂದದೊಂದಿಗೆ ಶ್ರಮಿಸಬೇಕು. ಕಲಿಕೆಯಲ್ಲಿ ಹಿಂದುಳಿದ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಫಲಿತಾಂಶ ಸುಧಾರಿಸಲು ಪ್ರಯತ್ನಿಸಬೇಕು. ಆ ನಿಟ್ಟಿನಲ್ಲಿ ಶಿಕ್ಷಕರು ಸಂಕಲ್ಪ ಮಾಡಬೇಕು ಎಂದರು.

ಪ್ರಾಚಾರ್ಯ ಪಿ.ಎ.ಹೇಮಗಿರಿಮಠ, ಮುಖ್ಯ ಶಿಕ್ಷಕ ಎಸ್.ಆಯ್. ಗಿಡ್ಡಪ್ಪಗೋಳ, ಯು.ಎ.ಹಿರೇಮಠ, ಎಂ.ಎ.ಬಳಬಟ್ಟಿ, ಮಹೇಶ್ ಗಾಳಪ್ಪಗೋಳ, ಜಿ.ಎಂ.ಹಿರೇಮಠ. ಕೆ.ಜಗದೇವಿ ಇತರರಿದ್ದರು.

## ರಾಷ್ಟ್ರೀಯ ಮತದಾರರ ದಿನ ಆಚರಣೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ಬಿಎಲ್ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆಯನ್ನು ಗುರುವಾರ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎ.ವ್ಹಿ.ಸೂರ್ಯವಂಶಿ ಅವರು ಮತದಾನದ ಮಹತ್ವದ ಕುರಿತು ಮಾತನಾಡಿದರು. ಮಹಾವಿದ್ಯಾಲಯದ ಐಕ್ಯೂಎಸಿ ವಿಭಾಗದ ಸಂಯೋಜಕ, ರಾಜ್ಯಶಾಸ್ತ್ರದ ಪ್ರಾಧ್ಯಾಪಕ ದೀಲಿಪಕುಮಾರ ಕೆ. ಅವರು ಮತದಾನಕ್ಕಿಂತ ಇನ್ನೊಂದಿಲ್ಲ. ನಾನು ಖಚಿತವಾಗಿ ಮತದಾನ ಮಾಡುವ ಎಂಬ ಧ್ಯೇಯ ವಾಕ್ಯ ಹೇಳುವದರೊಂದಿಗೆ ನಾನು ಯಾವುದೇ ಸಂದರ್ಭದಲ್ಲಿ ಯಾವುದೇ ಆಮಿಷಕ್ಕೆ ಒಳಗಾಗದೇ ಪ್ರಾಮಾಣಿಕವಾಗಿ ಮತದಾನವನ್ನು ಮಾಡುವುದಾಗಿ ಎಂಬ ಪ್ರತಿಜ್ಞಾ ವಿಧಿಯನ್ನು ವಿದ್ಯಾರ್ಥಿಗಳಿಗೆ ಬೋಧಿಸಿದರು. ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ಡಾ.ರವೀಂದ್ರಗೌಡ ಕೆ., ಡಾ.ವೈ.ಬಿ.ನಾಯಕ, ಪ್ರೊ.ಡಿ.ಎಸ್.ಲಗಳಿ, ಪ್ರೊ.ಸಿ.ಪಿ.ದಡೇಕರ ಇತರರು ಇದ್ದರು.

## ಇಂಡಿ ಬಿಇಓ ಅಮಾನತಿಗೆ ಜಯಕರ್ನಾಟಕ ಆಗ್ರಹ



**ಉದಯರಶ್ಮಿ ನ್ಯೂಸ್**

ವಿಜಯಪುರ: ಇಂಡಿ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ನಡೆಸಿರುವ ಭ್ರಷ್ಟಾಚಾರದ ಕುರಿತು ತನಿಖೆ ಕೈಗೊಂಡು ಅವರನ್ನು ಅಮಾನತ್ತುಗೊಳಿಸುವಂತೆ ಆಗ್ರಹಿಸಿ ಜಯ ಕರ್ನಾಟಕ ಸಂಘಟನೆಯ ವತಿಯಿಂದ ಉಪ ನಿರ್ದೇಶಕರು, ಸಾ.ಶಿ.ಇ. ವಿಜಯಪುರ ಮುಖಾಂತರ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಇವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷ ಮಹೇಶ ನಾಯಕ ಮಾತನಾಡಿ, ಡಿ.ಬಿ.ಇ. ಪ್ರೌಢಶಾಲಾ ನಿಂಬಾಳ ಎಲ್.ಟಿಗೆ ಸಂಬಂಧಿಸಿದಂತೆ ಅಕ್ರಮವಾಗಿ ನಡೆಯುತ್ತಿರುವ ಶಾಲೆಗೆ ಶಿಸ್ತು ಕ್ರಮ ಕೈಗೊಳ್ಳಲು ತಿಳಿಸಲಾಗಿತ್ತು. ಅದಕ್ಕೆ ತಾವು ಇಂಡಿ ಕ್ಷೇತ್ರ ಶಿಕ್ಷಣ ಅಧಿಕಾರಿಗಳಿಗೆ ವಿಚಾರಣೆ ನಡೆಸಿ ಶಿಸ್ತಿನ ಕ್ರಮ ಕೈಗೊಳ್ಳಲು ಆದಶಿಸಿದ್ದಿರಿ. ಆದರೆ ಇಂಡಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ತನಿಖೆ ನಡೆಸಿ, ಸ್ವಂತ ಜಾಗವಿಲ್ಲದ ಸರ್ಕಾರದ ಜಾಗದಲ್ಲಿ ಅಕ್ರಮವಾಗಿ ನಡೆಯುತ್ತಿರುವ ಸಂಸ್ಥೆ ಎಂದು ಸ್ಪಷ್ಟವಾಗಿ ಕಂಡು ಬಂದ ಕಾರಣ ಅವರ ವೇತನ ಅನುದಾನವನ್ನು ಸಹ ಎರಡು ತಿಂಗಳು ತಡೆ ಹಿಡಿಯಲಾಗಿತ್ತು. ಆದರೆ ಈಗ ವೇತನ ಅನುದಾನ ಬಿಡುಗಡೆ ಮಾಡಿರುವದರಿಂದ ಇಲ್ಲಿ ಸ್ಪಷ್ಟವಾಗಿ ಭ್ರಷ್ಟಾಚಾರ ನಡೆದಿರುವ ಬಗ್ಗೆ ಕಂಡುಬರುತ್ತದೆ.

ಆದ್ದರಿಂದ ಕೂಡಲೇ ಭ್ರಷ್ಟಾಚಾರ ಎಸಗಿದ ಕ್ಷೇತ್ರ ಶಿಕ್ಷಣ ಅಧಿಕಾರಿ ಮೇಲೆ ತನಿಖೆ ನಡಿಸಿ ಅಮಾನತ್ತು ಗೊಳಿಸಬೇಕು.

ಒಂದು ವೇಳೆ ಇವರ ಮೇಲೆ ಕ್ರಮ ಕೈಗೊಳ್ಳದೇ ಹೋದಲ್ಲಿ ಜಿಲ್ಲೆಯಾದ್ಯಂತ ಹೋರಾಟ ಕೈಗೊಳ್ಳಲಾಗುವದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ರಾಕೇಶ ಕಲ್ಲೂರ, ಗೌರವಾಧ್ಯಕ್ಷ ಸುರೇಶ ದೇಸಾಯಿ, ಸುರೇಶ ರಜಪೂತ, ವಿಜಯಸಿಂಗ ರಜಪೂತ, ಶಿವಗಂಗಾ ಕಟ್ಟಿಮನಿ, ಮಲ್ಲಮ್ಮ ಲಮಾಣಿ, ಅಶ್ವಿನಿ ಸಾವಂತ, ಸವಿತಾ ಪೂಜಾರಿ, ನೀಲಕಂಠ ಚವ್ಹಾಣ, ರೇಣುಕಾ ಕಟ್ಟಿಮನಿ, ರೇಣುಕಾ ಅಗಸರ, ಸಂತೋಷ ಚವ್ಹಾಣ, ಮುತ್ತು ಪೊಲೀಸ್‌ಪಾಟೀಲ, ದೇವರ ಹಿಪ್ಪರಗಿ ಅಧ್ಯಕ್ಷ ರಹಿಮಾನ ಕಣಕಾಲ್ ಇನ್ನಿತರರು ಉಪಸ್ಥಿತರಿದ್ದರು.

# ಗಣರಾಜ್ಯೋತ್ಸವ.. ಒಂದು ಅವಲೋಕನ

**ಉದಯರಶ್ಮಿ ದಿನಪತ್ರಿಕೆ**

1947ರಲ್ಲಿ ನಮ್ಮ ಭಾರತ ದೇಶವು ಬ್ರಿಟಿಷರ ಆಳ್ವಿಕೆಯಿಂದ ಸ್ವತಂತ್ರವಾಯಿತಷ್ಟೇ, ಆದರೆ ನಮಗೆ ನಮ್ಮದೇ ಆದ ಸಂವಿಧಾನ ಇಲ್ಲದೆ ಇರುವುದರಿಂದ ಸ್ವತಂತ್ರದ ನಂತರವೂ ಕೂಡ ಭಾರತ ದೇಶವು ತನ್ನದೇ ಆದ ಸಂವಿಧಾನವನ್ನು ಹೊಂದುವವರೆಗೆ ಕಿಂಗ್ ಜಾರ್ಜ್ ರ ಸಂವಿಧಾನದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿತ್ತು.

1929 ರಲ್ಲಿ ಲಾಹೋರ್‌ನಲ್ಲಿ ನಡೆದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಸಭೆಯಲ್ಲಿ ಸಂಪೂರ್ಣ ಸ್ವತಂತ್ರ ಭಾರತ ದೇಶವನ್ನು ಪಡೆಯುವ ಒಕ್ಕೊರಲಿನ ಧ್ವನಿ ಹೊಮ್ಮಿತು. ಇದರ ಪರಿಣಾಮವಾಗಿ 1930ರ ಜನವರಿ 26ರಂದು ಭಾರತ ದೇಶವನ್ನು ಪೂರ್ಣ ಸ್ವರಾಜ್ ದೇಶ ಎಂದು ಘೋಷಿಸಲಾಯಿತು. ಭಾರತದ ಸ್ವಾತಂತ್ರ್ಯದ ಇತಿಹಾಸದಲ್ಲಿ ಜನವರಿ 26ರ ಈ ದಿನ ಅತ್ಯಂತ ಮಹತ್ವಪೂರ್ಣ ಎನಿಸಿತ್ತು.


**ವೀಣಾಂತರಂಗ**



–ವೀಣಾ ಎಚ್. ಪಾಟೀಲ್, ಮುಂಡರಗಿ

1945ರಲ್ಲಿ ದ್ವಿತೀಯ ಮಹಾಯುದ್ಧ ಮುಗಿದ ನಂತರ ಭಾರತದ ಸ್ವಾತಂತ್ರ್ಯದ ಕೂಗು ಮತ್ತಷ್ಟು ಜೋರಾಯಿತು. ಇನ್ನು ತಮಗೆ ಭಾರತದಲ್ಲಿ ಉಳಿಗಾಲವಿಲ್ಲ ಎಂದು ಅರಿತ ಬ್ರಿಟಿಷರು ಭಾರತಕ್ಕೆ ಸ್ವಾತಂತ್ರ್ಯ ನೀಡುವ ಮುನ್ನ ಮೂರು ಜನ ಬ್ರಿಟನ್ ಸದಸ್ಯರ ಒಂದು ನಿಯೋಗವನ್ನು ಭಾರತಕ್ಕೆ ಕಳುಹಿಸಿ ಇಲ್ಲಿನ ವಿಷಯಗಳನ್ನು ಅಧ್ಯಯನ ಮಾಡಿ ಸುಗಮ ಆಡಳಿತವನ್ನು ನಡೆಸಲು ಭಾರತ ತನ್ನದೇ ಆದ ಸಂವಿಧಾನವನ್ನು ಹೊಂದಬೇಕು ಅದಕ್ಕಾಗಿ ತನ್ನದೇ ರಾಜ್ಯಾಂಗದ ಸದಸ್ಯರ ಒಂದು ಸಮಿತಿಯನ್ನು ನಿರ್ಮಿಸಿ ಆ ಸಮಿತಿಯ ಎಲ್ಲಾ ಸದಸ್ಯರ ಅನುಮತಿಯ ಮೇರೆಗೆ ಸಂವಿಧಾನದ ಕರಡು ಪ್ರತಿಯನ್ನು ತಯಾರಿಸಲಿ ಎಂದು 1946ರ ಮಾರ್ಚ್ 16ರಂದು ವರದಿ ಸಲ್ಲಿಸಿತು.

ಮುಂದೆ 1946ರ ಡಿಸೆಂಬರ್ ನಲ್ಲಿ ರಾಜ್ಯಾಂಗ ರಚನಾ ಸಭೆಗೆ ಚುನಾವಣೆಗಳು ನಡೆದು 297 ಜನ ಸದಸ್ಯರು ಆಯ್ಕೆಯಾದರು. ಡಿಸೆಂಬರ್ ಒಂಬತ್ತರಂದು ನಡೆದ ರಾಜ್ಯಾಂಗ ರಚನಾ ಸಭೆಗೆ ಸುಮಾರು 207 ಜನರು ಹಾಜರಿದ್ದರು. ಮುಂದಿನ ಎರಡು ದಿನಗಳಲ್ಲಿ ಬಾಬು ರಾಜೇಂದ್ರ ಸಿಂಗ್ ಪ್ರಸಾದ್ ಅವರನ್ನು ರಾಜ್ಯಾಂಗ ರಚನಾ ಸಭೆಯ ಖಾಯಂ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು. ಈಗಾಗಲೇ ಬೆಂಗಾಲ ಪ್ರಾಂತ್ಯದಿಂದ ಆಯ್ಕೆಯಾಗಿ ಬಂದ ಡಾ. ಬಿ. ಆರ್. ಅಂಬೇಡ್ಕರ್ ಅವರನ್ನು ರಾಜ್ಯಾಂಗ ಸಭೆಯ ಧ್ಯೇಯೋದ್ದೇಶಗಳನ್ನು ಕುರಿತು ಮಾತನಾಡಲು ಆಹ್ವಾನಿಸಿದಾಗ ಅತ್ಯಂತ ಸ್ಪಷ್ಟವಾಗಿ ಮಾತನಾಡಿದ ಡಾಕ್ಟರ್ ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚನೆಯ ಮಹತ್ವದ ಕುರಿತು ಬೆಳಕು ಚೆಲ್ಲಿದರು. ಇದಕ್ಕೂ ಮುನ್ನ ಜವಾಹರ ಲಾಲ್ ನೆಹರು ಅವರು ರಾಜ್ಯಾಂಗ ಸಭೆಯನ್ನು ಉದ್ದೇಶಿಸಿ ಮಾತನಾಡಿದ್ದರೂ ಕೂಡ ಅಂಬೇಡ್ಕರ್ ಅವರ ಮಂಡನೆಯಲ್ಲಿ ಹೆಚ್ಚಿನ ತೂಕ ಇರುವುದನ್ನು ಕಂಡು ಅವರಿಲ್ಲದೆ ಸಂವಿಧಾನದ ಕರಡು ರಚನೆ ಅಸಾಧ್ಯ ಎಂದು ಭಾವಿಸಿದ ರಾಜ್ಯಾಂಗ ಸಮಿತಿ 1947ರ ಜನವರಿ 24ರಂದು ಸರ್ದಾರ್ ವಲ್ಲಭಭಾಯಿ ಪಟೇಲರನ್ನು ಅಧ್ಯಕ್ಷರನ್ನಾಗಿಸಿ ಸುಮಾರು 50 ಜನ ಸದಸ್ಯರ ಸಲಹಾ ಸಮಿತಿಯನ್ನು ರಚಿಸಿತು.




ಈ ಸಲಹಾ ಸಮಿತಿಯಲ್ಲಿ ಮತ್ತೆ ನಾಲ್ಕು ಉಪ ಸಮಿತಿಗಳನ್ನು ರಚಿಸಿದರು.ಅವುಗಳು

1 ಮೂಲಭೂತ ಹಕ್ಕುಗಳ ಉಪಸಮಿತಿ

2 ಅಲ್ಪಸಂಖ್ಯಾತರ ಉಪ ಸಮಿತಿ

3 ಈಶಾನ್ಯ ಗಡಿ ನಿವಾಸಿಗಳ ಉಪಸಮಿತಿ

4 ಪ್ರತ್ಯೇಕ ಮತ್ತು ಭಾಗಶಃ ಪ್ರತ್ಯೇಕವಾದ ರಾಜ್ಯಗಳ ಉಪಸಮಿತಿ

ಈ ಉಪಸಮಿತಿಗಳಲ್ಲಿ ಮೊದಲೆರಡು ಉಪಸಮಿತಿಗಳ ಸದಸ್ಯರಾದ ಡಾಕ್ಟರ್ ಬಿ. ಆರ್. ಅಂಬೇಡ್ಕರ್ ಅವರು ಮೂಲಭೂತ ಹಕ್ಕುಗಳ ಉಪಸಮಿತಿಯಲ್ಲಿ ಹೆಚ್ಚಿನ ಆಸಕ್ತಿ ತೋರಿಸಿ ವಸ್ತುನಿಷ್ಠವಾದ ಟಿಪ್ಪಣಿಗಳನ್ನು ಮಾಡಿಕೊಟ್ಟರು. ಸುಮಾರು 60 ದೇಶಗಳ ಸಂವಿಧಾನವನ್ನು ಅಭ್ಯಸಿಸಿದ ಫಲವಾಗಿ ಹುಟ್ಟಿದ ವಿಚಾರಧಾರೆಗಳ ಗಟ್ಟಿ ಪಾಕವೇ ಅವರ ಸಂವಿಧಾನದ ಕರಡು ಪ್ರತಿಯ ರಚನೆಯಲ್ಲಿ ಮಹತ್ವದ ಪಾತ್ರ ವಹಿಸಿತು.

ಮುಂದೆ 1947 ರ ಏಪ್ರಿಲ್ ನಲ್ಲಿ ಸಂವಿಧಾನ ರಚನಾ ಸಮಿತಿ ಮತ್ತೆ ಮೂರು ಸಮಿತಿಗಳನ್ನು ರಚಿಸುತ್ತದೆ.

1 ಕೇಂದ್ರ ಅಧಿಕಾರ ಸಮಿತಿ

2 ಕೇಂದ್ರ ಸಂವಿಧಾನ ಸಮಿತಿ ಮತ್ತು

3 ತಾತ್ಕಾಲಿಕ ಸಂವಿಧಾನ ಸಮಿತಿ

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಕೇಂದ್ರ ಸಂವಿಧಾನ ಸಮಿತಿಯ ಸದಸ್ಯರಾಗಿ ಆಯ್ಕೆಯಾಗುತ್ತಾರೆ. ಮುಂದೆ ಸ್ವತಂತ್ರ ಭಾರತದ ಘೋಷಣೆ 1947 ಆಗಸ್ಟ್ 15ರಂದು ಆದಾಗ, ಭಾರತದಿಂದ ವಿಭಜನೆಗೊಂಡ ಬಂಗಾಳ ಪ್ರಾಂತ್ಯದಿಂದ ಆಯ್ಕೆಯಾಗಿದ್ದ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸ್ವತಂತ್ರ ದೇಶದ ಮೊದಲ ಪ್ರಧಾನಿ ಜವಾಹರ್ ಲಾಲ್ ನೆಹರು ಅವರ ಆಹ್ವಾನದ ಮೇರೆಗೆ ಭಾರತ ದೇಶದ ಮೊದಲ ಕಾನೂನು ಮಂತ್ರಿಯಾಗಿ ಆಯ್ಕೆಯಾಗುತ್ತಾರೆ. ಮುಂದಿನ ಕೆಲವೇ ದಿನಗಳಲ್ಲಿ ಭಾರತೀಯ ಸಂವಿಧಾನದ ಕರಡು ಪ್ರತಿ ರಚನೆಯ ಅಧ್ಯಕ್ಷರಾಗಿ ಆಯ್ಕೆಯಾದ ಅಂಬೇಡ್ಕರ್ ಅವರ ಜೊತೆಗೆ ಏ ಕೃಷ್ಣಸ್ವಾಮಿ ಅಯ್ಯರ್, ಎನ್ ಗೋಪಾಲಸ್ವಾಮಿ ಅಯ್ಯಂಗಾರ್, ಕೆಎಂ ಮುನ್ಶಿ, ಮಹಮ್ಮದ್ ಸಾದುಲ್ಲ, ಬೀ ಎಲ್ ಮಿಟ್ಟರ್ ಮತ್ತು ಡಿ ಪಿ ಖೈತಾನ್ ಕರಡು ರಚನಾ ಸಮಿತಿಯ ಇನ್ನಿತರರು ಸದಸ್ಯರಾಗಿ ಕಾರ್ಯನಿರ್ವಹಿಸುತ್ತಾರೆ.


ಇವರೆಲ್ಲರ ಸತತ ಪ್ರಯತ್ನದ ಫಲವಾಗಿ ಹಲವರು ಸಭೆಗಳ ಮೂಲಕ ಮುಖ್ಯವಾಗಿ ಡಾಕ್ಟರ್ ಬಿ.ಆರ್. ಅಂಬೇಡ್ಕರ್ ಅವರ ನೇತೃತ್ವದಲ್ಲಿ ಸಂವಿಧಾನದ ಮೂಲ ಪ್ರತಿ ಸಿದ್ಧವಾಯಿತು. ಮತ್ತೆ ಅದರ ಕುರಿತ ಪರಿಶೀಲನಾ ಸಭೆ ಪರ ವಿರೋಧ ಚರ್ಚೆ, ಹಲವಾರು ಸುತ್ತಿನ ಸಭೆ ಮಾತು ಕತೆಗಳ ನಂತರ ಅಂತಿಮವಾಗಿ 1949 ನವಂಬರ್ 19 ರಂದು ಡಾಕ್ಟರ್ ರಾಜೇಂದ್ರ ಪ್ರಸಾದ್ ಅವರ ಅಧ್ಯಕ್ಷತೆಯಲ್ಲಿ ಸಂವಿಧಾನದ ಅಂತಿಮ ಪ್ರತಿ ಸುಮಾರು ಎರಡು ವರ್ಷ 17 ತಿಂಗಳುಗಳ ಅವಧಿಯಲ್ಲಿ ಸಿದ್ಧವಾಗಿ ಎಲ್ಲ ರೀತಿಯ ಪರಾಮರ್ಶೆಗೆ ಒಳಗಾಗಿ ತನ್ನ ಅಂತಿಮ ರೂಪರೇಶೆಗಳನ್ನು ಹೊಂದಿತು.





ಈ ಸಭೆಯಲ್ಲಿ ಮಾತನಾಡಿದ ಡಾಕ್ಟರ್ ಬಿ.ಆರ್. ಅಂಬೇಡ್ಕರ್ ಅವರು ಭಾರತದಂತಹ ಸಾಮಾಜಿಕ, ಸಾಂಸ್ಕೃತಿಕ ಮತ್ತು ಮೌಲ್ಯಗಳನ್ನು ಹೊಂದಿದ ದೇಶದಲ್ಲಿ ಎಲ್ಲರಿಗೂ ಸಮಾನವಾದ ಹಕ್ಕುಗಳು ಮತ್ತು ಕರ್ತವ್ಯಗಳನ್ನು ಘೋಷಿಸಲಾಗಿದ್ದು, ಎಲ್ಲರೂ ಕಾನೂನಿನ ಅಡಿಯಲ್ಲಿ ಸರ್ವ ಸಮಾನರು ಎಂದು ಸಾರಿದರು, ತಪ್ಪು ಮಾಡಿದವರಿಗೆ ಶಿಕ್ಷೆ ಕಡ್ಡಾಯ ಎಂಬ ಮಾತು ಅವರದಾಗಿತ್ತು. ಆರ್ಥಿಕ ಮತ್ತು ಔದ್ಯೋಗಿಕ ಮೌಲ್ಯವರ್ಧನೆಗೆ ಕಾನೂನು ಬದ್ಧ ಕಾರ್ಯನಿರ್ವಹಣೆ ಅತ್ಯಗತ್ಯ ಎಂಬುದನ್ನು ಮನದಟ್ಟು ಮಾಡಿಕೊಟ್ಟರು. ಅತ್ಯಂತ ಕೆಳ ಹಂತದಲ್ಲಿರುವ, ದಲಿತ ದುರ್ಬಲರಿಗೆ ಸಂವಿಧಾನದ ಅಡಿಯಲ್ಲಿ ಕೆಲವು ಪ್ರತ್ಯೇಕ ಕಾನೂನುಗಳ ಮೂಲಕ ಮೇಲೆ ತರುವ ಸುಧಾ ಅವರ ಜೀವನ ಮಟ್ಟವನ್ನು ಸುಧಾರಿಸುವ ಕ್ರಮದ ಅವಶ್ಯಕತೆಯನ್ನು ಸದಸ್ಯರಿಗೆ ಮನದಟ್ಟು ಮಾಡಿಕೊಟ್ಟರು.ಸರ್ವರಿಗೂ ಸಮಪಾಲು ಸಮ ಬಾಳು ಎಂಬ ಘೋಷದ ಮೂಲಕ ಸಂವಿಧಾನದ ಮೂಲ ಉದ್ದೇಶವನ್ನು ಎಲ್ಲರಿಗೂ ಮನವರಿಕೆ ಮಾಡಿಕೊಟ್ಟರು.

ಭಾರತದಂತಹ ಹಲವಾರು ಜಾತಿ, ಧರ್ಮ, ಭಾಷೆಗಳನ್ನು ಮಾತನಾಡುವ ದೇಶಕ್ಕೆ ಅತ್ಯಗತ್ಯವಾದ ಸಾಂವಿಧಾನಿಕ ಮಾನ್ಯತೆಗಳನ್ನು ದೊರಕಿಸಿಕೊಡಲು ಹಗಲಿರುಳು ಶ್ರಮಿಸಿದ ಸಂವಿಧಾನ ಕರಡು ರಚನಾ ಸಮಿತಿಯ ಶ್ರಮದ ಫಲವೇ ಒಟ್ಟು 395 ವಿಧಿಗಳು ಮತ್ತು ಎಂಟು ಅನುಸೂಚಿಗಳನ್ನು ಹೊಂದಿರುವ ಸಾವಿರಾರು ಬಾರಿ ತಿದ್ದುಪಡಿ ಮಾಡಲ್ಪಟ್ಟು ತಯಾರಾದ ಸಂವಿಧಾನದ ಕರಡು ಪ್ರತಿಯನ್ನು ಆ ದಿನ ಡಾಕ್ಟರ್ ಬಿ. ಆರ್. ಅಂಬೇಡ್ಕರ್ ಅವರು ಅಂದಿನ ರಾಷ್ಟ್ರಪತಿ ಡಾಕ್ಟರ್ ಬಾಬು ರಾಜೇಂದ್ರ ಪ್ರಸಾದ್ ಅವರಿಗೆ ಹಸ್ತಾಂತರಿಸಿದರು. ಇಂದಿಗೂ ಜಗತ್ತಿನ ಅತಿ ದೊಡ್ಡ ಜನತಂತ್ರ ವ್ಯವಸ್ಥೆಯ ದೇಶವಾಗಿರುವ ಭಾರತದ ಸಂವಿಧಾನದ ಮಹತ್ವದ ಕುರಿತು ಎರಡು ಮಾತಿಲ್ಲ ಎಂಬುದು ಅತಿಶಯೋಕ್ತಿಯೇನಲ್ಲ.

ಈ ಸಂವಿಧಾನವನ್ನು 1950 ಜನವರಿ 26ರಂದು ಜಾರಿಗೆ ತರಲಾಯಿತು. ಅಂದಿನಿಂದಲೇ ಸ್ವತಂತ್ರ ಭಾರತದ ಗಣರಾಜ್ಯೋತ್ಸವವನ್ನು ಘೋಷಿಸಲಾಯಿತು. 1930ರ ಜನವರಿ 26ರ ಪೂರ್ಣ ಸ್ವರಾಜ್ ದಿವಸವನ್ನು ನೆನಪಿನಲ್ಲಿಟ್ಟುಕೊಂಡು ಆ ದಿನವನ್ನೇ ಸ್ವತಂತ್ರ ಗಣರಾಜ್ಯದ ಸಂವಿಧಾನ ದಿನವನ್ನಾಗಿ ಆಚರಿಸಲಾರಂಭಿಸಿದರು.



ಪ್ರತಿ ವರ್ಷವೂ ಗಣರಾಜ್ಯೋತ್ಸವದ ಈ ದಿವಸವನ್ನು ಪ್ರತಿಯೊಂದು ಶಾಲೆ, ಕಾಲೇಜುಗಳಲ್ಲಿ, ಶಿಕ್ಷಣ ಸಂಸ್ಥೆಗಳಲ್ಲಿ, ಸಾರ್ವಜನಿಕ ಸಂಸ್ಥೆಗಳಲ್ಲಿ ವಿಜೃಂಭಣೆಯಿಂದ ಆಚರಿಸುತ್ತಾರೆ. ವಿವಿಧತೆಯಲ್ಲಿ ಏಕತೆಯನ್ನು ತೋರುವ ಭಾರತೀಯ ಸಂಸ್ಕೃತಿ ಪರಂಪರೆಯ ಕುರಿತಾದ ದೇಶಭಕ್ತಿ ಗೀತೆಗಳು ಮನೆ ಮನೆಗಳಲ್ಲಿ ಹೊಮ್ಮುತ್ತವೆ.






ದೇಶದ ರಾಜಧಾನಿ ದೆಹಲಿಯಲ್ಲಿ ಗಣರಾಜ್ಯೋತ್ಸವದ ದಿನ ಧ್ವಜಾರೋಹಣ ಮಾಡುತ್ತಾರೆ. ಸ್ವಾತಂತ್ರ್ಯೋತ್ಸವದ ದಿನ ದೇಶದ ಪ್ರಧಾನ ಮಂತ್ರಿಗಳು ಕೆಂಪುಕೋಟೆಯ ಮೇಲೆ ನಮಗೆ ಸ್ವಾತಂತ್ರ್ಯ ಸಿಕ್ಕ ಐತಿಹಾಸಿಕ ಘಳಿಗೆಯ ದ್ಯೋತಕವಾಗಿ ಕೆಳಗಿನಿಂದ ಮೇಲಕ್ಕೆ ಎಳೆಯುತ್ತಾ ಧ್ವಜವನ್ನು ಹಾರಿಸಿದರೆ, ಜನವರಿ 26ರ ದಿನ ಗಣರಾಜ್ಯೋತ್ಸವದ ಅಂಗವಾಗಿ ರಾಷ್ಟ್ರಪತಿಯವರು ರಾಜಧಾನಿ ದೆಹಲಿಯ ಜನಪಥ ದಲ್ಲಿ ಧ್ವಜಸ್ತಂಭದ ಮೇಲೆ ಕಟ್ಟಿದ ಧ್ವಜವನ್ನು ಎಳೆಯದೆ ಹಾರಿಸುತ್ತಾರೆ. ಇದು ಗಣರಾಜ್ಯೋತ್ಸವದ ವೈಶಿಷ್ಟತೆಯಾಗಿರುತ್ತದೆ. ಈ ಕಾರ್ಯಕ್ರಮಕ್ಕೆ ವಿದೇಶಿ ಗಣ್ಯರನ್ನು ಕೂಡ ಆಹ್ವಾನಿಸಲಾಗಿರುತ್ತದೆ.

**ಇಂದು ಗಣರಾಜ್ಯೋತ್ಸವ ಸಂಭ್ರಮ, ತನ್ನಿಮಿತ್ತ ಈ ವಿಶೇಷ ಲೇಖನ**

ಧ್ವಜಾರೋಹಣದ ನಂತರ ರಾಷ್ಟ್ರಪತಿಯವರು ರಾಷ್ಟ್ರವನ್ನು ಉದ್ದೇಶಿಸಿ ಮಾತನಾಡುತ್ತಾರೆ. ನಂತರ ನಮ್ಮ ದೇಶದ ಸರ್ವೋಚ್ಚ ನಾಯಕರಾದ ರಾಷ್ಟ್ರಪತಿಯವರಿಗೆ ಭಾರತ ದೇಶದ ಮಿಲಿಟರಿಯ ಮೂರು ಪಡೆಗಳಾದ ಭೂ ಸೇನೆ, ನೌಕಾ ಸೇನೆ ಮತ್ತು ವಾಯು ಸೇನೆಗಳ ಮುಖ್ಯ ಅಧಿಕಾರಿಗಳು ತಂತಮ್ಮ ತಂಡಗಳೊಂದಿಗೆ ಪೆರೇಡ್ ನಲ್ಲಿ ಭಾಗವಹಿಸಿ ಗೌರವ ಸಲ್ಲಿಸುತ್ತಾರೆ. ಇದರ ಜೊತೆ ಜೊತೆಗೆ ಯುದ್ಧ ವಾಹನಗಳು, ನೌಕೆಗಳು ಮತ್ತು ಮಿಗ್ ವಿಮಾನಗಳನ್ನು, ನಮ್ಮ ದೇಶದ ಮಿಲಿಟರಿ ಪಡೆಯ ಸಾಮರ್ಥ್ಯವನ್ನು ಸಾರುವ ಈ ಗಣರಾಜ್ಯೋತ್ಸವದ ಪಥಸಂಚಲನದ ಪೆರೇಡ್ ವಿಶ್ವ ಪ್ರಸಿದ್ಧವಾಗಿದೆ. ಮಿಲಿಟರಿ ಪಡೆಗಳ ಜೊತೆಗೆ ಗಡಿ ಭದ್ರತಾ ಪಡೆ, ಅರೆ ಸೈನಿಕ ಪಡೆ, ಗೃಹರಕ್ಷಕ ದಳ,ಎನ್ ಸಿ ಸಿ, ಭಾರತ ಸೇವಾದಳ, ಸ್ಕೌಟ್ಸ್ ಮತ್ತು ಗೈಡ್ಸ್ ಮತ್ತು ದೇಶದ ವಿವಿಧ ಭಾಗಗಳಿಂದ ಆಯ್ಕೆಯಾದ ವಿದ್ಯಾರ್ಥಿಗಳ ತಂಡಗಳು ಕೂಡ ಪಥಸಂಚಲದಲ್ಲಿ ಭಾಗವಹಿಸುತ್ತವೆ. ಈ ಪಥ ಸಂಚಲನಕ್ಕೆ ತಿಂಗಳುಗಟ್ಟಲೆ ಮುಂಚೆಯೇ ತರಬೇತಿ ನೀಡಲಾಗುತ್ತದೆ. ಸುಮಾರು ಎರಡು ಕಿಲೋಮೀಟರ್ ಗಿಂತಲು ಹೆಚ್ಚು ದೂರ ಸಾಗುವ ಈ ಆಕರ್ಷಕ ಪಥಸಂಚಲನದಲ್ಲಿ ವಿವಿಧ ರಾಜ್ಯಗಳ ಸಾಂಸ್ಕೃತಿಕ ಇಲಾಖೆಗಳು ತಂತಮ್ಮ ರಾಜ್ಯಗಳ ವಿಶಿಷ್ಟತೆಗಳನ್ನು ಕಟ್ಟಿಕೊಡುವ ಸ್ತಬ್ಧ ಚಿತ್ರಗಳ ಸಮೇತ ಭಾಗವಹಿಸಿ ಬಹುಮಾನ ಗಳಿಸುತ್ತಾರೆ. ವಿವಿಧ ರಂಗಗಳಲ್ಲಿ ಪ್ರಶಸ್ತಿ ಪಡೆದ ಮಕ್ಕಳನ್ನು, ಯುವಕರನ್ನು, ಸೈನಿಕರನ್ನು ಮತ್ತು ನಾಗರಿಕರನ್ನು ಇಂದು ಆಯಾ ಸ್ಥಳಗಳಲ್ಲಿ ಗೌರವಿಸಲಾಗುತ್ತದೆ.

ಒಟ್ಟಿನಲ್ಲಿ ಭಾರತ ದೇಶದ ಸಂವಿಧಾನಿಕ ಮೌಲ್ಯಗಳನ್ನು ಎತ್ತಿ ಹಿಡಿಯುವ ಈ ದಿನ ಪ್ರತಿ ಭಾರತೀಯನ ಮನೆ ಮನಗಳ ಹಬ್ಬವಾಗಿ ಪರಿಣಮಿಸಿದ್ದು ದೇಶ, ಭಾಷೆ, ಭೌಗೋಳಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ವ್ಯತ್ಯಾಸಗಳ ನಡುವೆಯೂ ವಿವಿಧತೆಯಲ್ಲಿ ಏಕತೆಯನ್ನು ಸಾರುವ ಸಾರೆ ಜಹಾಸೆ ಅಚ್ಛಾ ಹಿಂದೂಸ್ತಾನ್ ಹಮಾರ ಎಂಬ ಘೋಷಣೆ ಎಲ್ಲೆಡೆ ಅನುರಣಿಸುತ್ತದೆ.

**ಎಲ್ಲರಿಗೂ ಗಣರಾಜ್ಯೋತ್ಸವದ ಶುಭಾಶಯಗಳು**

# ಯುವಕರನ್ನು ಉತ್ತೇಜಿಸಲು ಮತದಾರರ ದಿನ :ಲಮಾಣಿ



**ಉದಯರಶ್ಮಿ ನ್ಯೂಸ್**


ವಿಜಯಪುರ: ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಬಂಜಾರಾ ಕನ್ನಡ ಹಾಗೂ ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಯುಕ್ತಾಶ್ರಯದಲ್ಲಿ "ರಾಷ್ಟ್ರೀಯ ಮತದಾರರ ದಿನ"ದ ಅಂಗವಾಗಿ ಹಮ್ಮಿಕೊಂಡಿದ್ದ ಪ್ರತಿಜ್ಞಾ ವಿಧಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವೀಧಿಯನ್ನು ಪ್ರೌಢ ಶಾಲೆಯ ಮುಖ್ಯ ಗುರು ಇ.ಡಿ.ಲಮಾಣಿಯವರು ಭೋಧಿಸಿದರು.

ನಂತರ ಮಾತನಾಡಿದ ಅವರು. ಚುನಾವಣಾ ಪ್ರಕ್ರಿಯೆಯಲ್ಲಿ ಮತದಾನದಲ್ಲಿ ಭಾಗವಹಿಸಲು ಯುವಕರನ್ನು ಉತ್ತೇಜಿಸಲು ಈ ದಿನ ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುತ್ತಿದೆ. ಭಾರತ ಪ್ರಜಾಪ್ರಭುತ್ವ ರಾಷ್ಟ್ರ. ಪ್ರತಿಯೊಬ್ಬ ಪ್ರಜೆಗೂ ಮತದಾನದ ಮೂಲಭೂತ ಹಕ್ಕು ಇದೆ. ರಾಷ್ಟ್ರವನ್ನು ಮುನ್ನಡೆಸಲು, ಸಾಮಾನ್ಯ ಜನರ ಸಮಸ್ಯೆಗಳನ್ನು ಪರಿಹರಿಸಲು, ಬದಲಾವಣೆ ತರಲು ಸಾಧ್ಯವಾಗುತ್ತದೆ ಎಂದು ಭಾವಿಸುವವ-ರಿಗೆ ತನ್ನ ನಾಯಕನನ್ನು ಆಯ್ಕೆ ಮಾಡುವ ಹಕ್ಕನ್ನು ಅವನು ಅಥವಾ ಅವಳು ಹೊಂದಿರುತ್ತಾರೆ. ರಾಷ್ಟ್ರೀಯ ಮತದಾರರ ದಿನವು ದೇಶದ ಭವಿಷ್ಯವು ಸುಳ್ಳಾಗಿರುವುದರಿಂದ ಭಾರತದ ಮಹತ್ವದ ಮೂಲವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಥ–'ಮಿಕ ಶಾಲೆಯ ಮುಖ್ಯ ಗುರುಗಳಾದ ಎಂ.ಬಿ.ಪೂಜಾರಿ, ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಮುಖ್ಯ ಗುರು ಸಂದೀಪ ರಾಠೋಡ, ಶಿಕ್ಷಕರಾದ ಎಸ್.ಕೆ.ಶಿಂಧೆ, ಆರ್.ವಿ.ಭುಜಂಗನವರ, ಎಸ್.ವಿ.ದೇಶಪಾಂಡೆ, ಜೆ.ಕೆ.ರಾಠೋಡ, ಎಸ್.ಡಿ.ಚವ್ಹಾಣ, ಆರ್.ಜಿ.ಜಾಧವ, ಎಸ್.ಎಂ.ಮಾಳಿ, ಸೋಮಶೇಖರ ರಾಠೋಡ, ಪಿ.ಕೆ.ಕೌಲಗಿ, ರೇಖಾ ರಜಪೂತ, ಆರ್.ಎಸ್.ಹಿರೇಮಠ, ಅಶೋಕ ರಾಠೋಡ ಸೇರಿದಂತೆ ಎಲ್ಲ ಶಿಕ್ಷಕ ಸಿಬ್ಬಂದಿ ವರ್ಗ ಹಾಗೂ ಬಿಎಡ್ ಪ್ರಶಿಕ್ಷಣಾರ್ಥಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಕಾರಾತ್ಮಕ ಆಲೋಚನೆ ಮೈಗೂಡಿಸಿಕೊಳ್ಳಿ :ಯಮುನಾ

**ಉದಯರಶ್ಮಿ ನ್ಯೂಸ್**



ಇಂಡಿ: ಪರಿವರ್ತನೆ ಜಗದ ನಿಯಮ, ಜಗತ್ತು ಬದಲಾದಂತೆ ನಾವು ಬದಲಾಗಬೇಕು. ಇಲ್ಲದಿದ್ದರೆ ಜೀವನ ಜಡತ್ವಕ್ಕೆ ಸಿಲುಕುತ್ತದೆ. ನೈತಿಕತೆ ಕೆಳಮಟ್ಟಕ್ಕೆ ಇಳಿಯುತ್ತಿದೆ. ಮನೆಗಳು ದೊಡ್ಡದಾಗುತ್ತಿದ್ದು ಮನಸ್ಸುಗಳು ಸಣ್ಣದಾಗುತ್ತಿವೆ ಎಂದು ಬ್ರಹ್ಮಕುಮಾರಿ ವಿವಿಯ ರಾಜಯೋಗಿನಿ ಯಮುನಾ ಅಕ್ಕಾ ಹೇಳಿದರು.

ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ವಿವಿ ಯಲ್ಲಿ ಯಮುನಾ ಅಕ್ಕಾ ಮತ್ತು ಸಂಗಡಿಗರಿಂದ ಲೋಕ ಕಲ್ಯಾಣಕ್ಕಾಗಿ 21 ದಿನಗಳ ಮೌನ ವ್ರತದ ಮುಕ್ತಾಯ ಸಮಾರಂಭದಲ್ಲಿ ಮಾತನಾಡಿದರು.

ಬ್ರಹ್ಮಕುಮಾರಿ ಶ್ರೀದೇವಿ ಅಕ್ಕನವರು ಮಾತನಾಡಿ, ಪ್ರಸ್ತುತ ಜಗತ್ತು ಬದಲಾವಣೆಯ ದಿಕ್ಕಿನಲ್ಲಿ ಮುನ್ನುಗುತ್ತಿದ್ದು ಮನಸ್ಸಿನ ನಿಯಂತ್ರಣ ತಪ್ಪುತ್ತಿದೆ. ಕ್ಷಣಿಕ ಸುಖಕ್ಕೆ ಇಡೀ ಜೀವನವನ್ನೇ ಹಾಳುಮಾಡಿಕೊಳ್ಳುತ್ತಿದ್ದೇವೆ. ಹೀಗಾಗಿ ಸಕಾರಾತ್ಮಕ ಆಲೋಚನೆಗಳನ್ನು ಮೈಗೂಡಿಸಿ ಕೋಳ್ಳಬೇಕಾಗಿದೆ ಎಂದರು.

ನಿವೃತ್ತ ಪ್ರಾಚಾರ್ಯ ಐ.ಬಿ.ಸುರಪುರ, ಪ್ರೊ. ಎಂ.ಜೆ.ಪಾಟೀಲ,ಶಿವಲಿಂಗಪ್ಪ ಪಟ್ಟದಕಲ್ಲ ಮೌನವ್ರತದ ಕುರಿತು ಮಾತನಾಡಿದರು.

ವಿಶ್ವನಾಥ ಜಾಮಗೊಂಡಿ, ಅರವಿಂದ ಕಠಾರೆ, ರಾಜಶ್ರೀ ಕೋಳೆಕರ, ನಿವೃತ್ತ ಪ್ರಾಚಾರ್ಯ ಎ.ಎಸ್.ಗಾಣಿಗೇರ, ಲಲಿತಾ ಹೂಗಾರ, ಸಾವಿತ್ರಿ ಜಾಮಗೊಂಡಿ, ಉಮಾ ಪಟ್ಟದಕಲ್ಲ, ಪವಿತ್ರಾ ವಾಲಿ, ಸುಮಾ ಪತಂಗಿ, ವಿದ್ಯಾಶ್ರೀ ಪಾಟಿಲ, ಜಯಶ್ರೀ ಪತ್ತಾರ, ದ್ರಾಕ್ಷಾಯಿಣಿ ಮೈದರಗಿ ಮತ್ತಿತರಿದ್ದರು.

# ಟೈಲರ್‌ಗಳ ಬೇಡಿಕೆ ಈಡೇರಿಕೆಗೆ ಬೆಂಗಳೂರು ಚಲೋ ಕರೆ

**ಉದಯರಶ್ಮಿ ನ್ಯೂಸ್**




ಕಲಕೇರಿ: ಟೈಲರ್‌ಗಳಿಗೆ ಕ್ಷೇಮನಿಧಿ, ಟೈಲರ್ ಮಕ್ಕಳಿಗೆ ವಿದ್ಯಾರ್ಥಿವೇತನ, ಹೊಲಿಗೆ ಕೆಲಸಗಾರರಿಗೆ ಮನೆ, ಯಂತ್ರ ಖರೀದಿಸಲು ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯ, ಆರೋಗ್ಯ ವಿಮೆ, ವಿವಾಹ ಧನ ಸಹಾಯ ಮತ್ತು ಹೆರಿಗೆ ಭತ್ಯೆ , ಪಿಂಚಣಿ ಸೌಲಭ್ಯ ಸೇರಿದಂತೆ ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಎಲ್ಲಾ ಟೈಲರ್‌ಗಳ ಪರವಾಗಿ ಸರಕಾರದ ಮೇಲೆ ಒತ್ತಡ ಹೇರಲು ರಾಜ್ಯದ ಮೂಲೆ ಮೂಲೆಗಳಿಂದ ಪದಾಧಿಕಾರಿಗಳು ಬೆಂಗಳೂರು ಹೊಗುತ್ತಿರುವುದಾಗಿ ಸಂಘದ ಗೌರವ ಅಧ್ಯಕ್ಷ ಶಾಂತಯ್ಯ ಹಿರೇಮಠ ಹೇಳಿದರು.

ಕರ್ನಾಟಕ ಸ್ಟೇಟ್ ಟೈಲರ್ ಅಸೋಸಿಯೇಷನ್ ವಲಯ ಸಮಿತಿ ಕಲಕೇರಿ ವತಿಯಿಂದ ಬೆಂಗಳೂರಿನಲ್ಲಿ ಜ.30 ಮಂಗಳವಾರದಂದು ಶಾಲಿನಿ ಮೈದಾನದಲ್ಲಿ ನಡೆಯುವ ಕೆಎಸ್‌ಟಿಎ 25ನೇ ವರ್ಷದ ರಜತ ಮಹೋತ್ಸವ ಕುರಿತ ಪತ್ರಿಕಾ ಗೋಷ್ಠಿಯಲ್ಲಿ ಅವರು ಮಾತನಾಡಿದರು

ಈ ವೇಳೆ ಕಾರ್ಯದರ್ಶಿ ನಬಿಲಾಲ ನಾಯ್ಕೋಡಿ, ಉಪಾಧ್ಯಕ್ಷರಾದ ಮನೋಹರ ಪತ್ತಾರ, ಸದಸ್ಯರಾದ ಸುಜಾತಾ ಅವಟಿ, ಮಡಿವಾಳಪ್ಪ ಜಂಬಗಿ, ಶೋಭಾ ಗದ್ದಗಿಮಠ, ಪೂಜಾ ಬಡಿಗೇರ, ವಿಜಯಲಕ್ಷ್ಮಿ ಬಡಿಗೇರ, ಸಾವಿತ್ರಿ ಬಡಿಗೇರ ಇದ್ದರು

# ಉತ್ತಮ ಆರೋಗ್ಯಕ್ಕೆ ಸಮತೋಲಿತ ಆಹಾರ ಅಗತ್ಯ



**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಮಹಿಳೆಯರು ಹಾಗೂ ಮಕ್ಕಳಿಗೆ ಸಮತೋಲಿತ ಆಹಾರ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ವಲಯ ಮೇಲ್ವಿಚಾರಕಿ ಶಾಂತಾ ನಾಯಿಕ್ ಹೇಳಿದರು.

ತಾಲ್ಲೂಕಿನ ಮಣೂರ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಜರುಗಿದ ಪಾಲಕರ ಸಭೆ ಹಾಗೂ ಪೌಷ್ಟಿಕ ಆಹಾರ ಹಾಗೂ ಆರೋಗ್ಯ ಶಿಬಿರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಆಧುನಿಕತೆಗೆ ತಕ್ಕಂತೆ ನಮ್ಮ ಆಹಾರ ಪದ್ಧತಿಯೂ ಬದಲಾಗುತ್ತಿದೆ. ಪೌಷ್ಟಿಕ ಆಹಾರ ಸಿಗುವುದು ಕಷ್ಟಕರವಾಗಿದೆ. ಗರ್ಭಿಣಿ ಮಹಿಳೆಯರು ಹಾಗೂ ಬೆಳೆಯುವ ಮಕ್ಕಳಿಗೆ ಮುಖ್ಯವಾಗಿ ಕಿಶೋರಿಯ-ರಿಗೆ ಉತ್ತಮ ಗುಣಮಟ್ಟದ ಆಹಾರ ಆರೋಗ್ಯಯುತ ಜೀವನಕ್ಕೆ ಸಹಕಾ-ರಿಯಾಗಬಲ್ಲದು ಅದಕ್ಕಾಗಿ ಮಹಿಳೆ ಮತ್ತು ಮಕ್ಕಳಿಗೆ ಸಮತೋಲಿತ, ಗುಣಮಟ್ಟದ, ಸತ್ವಯುತ ಆಹಾರದ ಬಗ್ಗೆ ಜಾಗೃತಿ ಮೂಡಿಸಬೇಕು. ನಾವು ಸಹ ಪಾಲಿಸಬೇಕು ಎಂದು ತಿಳಿಹೇಳಿದರು.

ಸಿಎಚ್‌ಓ ರುಕಿಯಾ ಬಾಗವಾನ, ಅಂಗನವಾಡಿ ಕಾರ್ಯಕರ್ತೆಯರಾದ ಶಾಂತಾ ಚಿಗರಿ, ಪ್ರೇಮಾ ನಡುವಿನಮನಿ ಮತ್ತು ಆಶಾ ಕಾರ್ಯಕರ್ತೆಯರು, ತಾಯಂದಿರು, ಮಕ್ಕಳು ಹಾಗೂ ಕಿಶೋರಿಯರು ಪಾಲ್ಗೊಂಡಿದ್ದರು.

## ಕಾವ್ಯರಶ್ಮಿ

# ಇನ್ನಷ್ಟು ಬೇಕೆನ್ನ ಹೃದಯಕ್ಕೆ ರಾಮ

– ವಿ.ಎಚ್.ಕೆ.ಹಿರೇಮಠ
("ನಮ್ಮ ಕಥಾ ಅರಮನೆ" ಬರಹಗಾರರು)





ದಶರಥ ನಂದನ ಕೌಶಲ್ಯ ಮಾತೆ ಪುನೀತೆ
ಲಕ್ಷ್ಮಣ ಭರತರು ಮೆರೆದರು ಸೋದರತೆ
ಮುರಿದನು ಶಿವಧನಸ್ಸನು ಶ್ರೀ ರಘುಪತೆ
ಆದಳು ಜನಕನ ಪುತ್ರಿ ರಾಮ ಸತಿ ಸೀತೆ

ದಶರಥನಾಸೆ ಶ್ರೀ ರಾಮಗೆ ಪಟ್ಟಾಭಿಷೇಕ
ಮಂಥರೆಯ ಮಂತ್ರವು, ಕೈಕೆಯ ತಂತ್ರಕೆ
ಅಯೋಧ್ಯ ನಗರದ ಬುವಿಯಲಿ ನಡುಕ
ಪಾದುಕೆ ಹೊತ್ತ ಭರತನಿಗೆ ಪಟ್ಟಾಭಿಷೇಕ

ನಡೆದ ರಾಮ ಘೋರ ವನವಾಸದೆಡೆಗೆ
ಮರುಳಾದಳು ಸೀತೆ ಮಾಯಾ ಜಿಂಕೆಗೆ
ವಶವಾದಳು ದುಷ್ಟ ರಾವಣನ ಬಲೆಗೆ
ಸುಳಿವ ನೀಡಿದ ಜಟಾಯು,ಸೋದರರಿಗೆ

ರಾಮ ಭಕ್ತ ಹನುಮ ನಿಂತ ಮುನ್ನೆಡೆಗೆ
ಸುಗ್ರೀವ, ವಾನರ ಸೈನ್ಯ ಜೊತೆ ಜೊತೆಗೆ
ಹರುಷ ರಾಮನುಂಗುರ ಸೀತಾ ಮಾತೆಗೆ
ಲಂಕಾ ದಹನವು ಹನುಮನ ಕೆಂಗಣ್ಣಿಗೆ

ರಾವಣ ಸೋದರ ವಿಭೀಷಣ ಸುಜನನು
ನೀಡಿದ ಶ್ರೀ ರಾಮಗೆ ಸಹ ಬೆಂಬಲವನು
ರಾಮ ಬಾಣಕೆ ರಾವಣ ಬುವಿ ಸೇರಿದನು
ಅಯೋಧ್ಯಗೆ ಮರಳಿದ ಸೀತಾ ರಾಮನು

ಇನ್ನಷ್ಟು ಬೇಕೆನ್ನ ಹೃದಯಕ್ಕೆ ನೀ ರಾಮ
ನಿನ್ನ ನಾಮದ ಬಲವು ಬೇಕೆನಗೆ ರಾಮ
ಹಸಿವ ನೀಗಿಸಿದೆ ನಿನ್ನ ಶ್ರೀ ರಾಮ ನಾಮ
ಭಜಿಸುವೆ ನಿತ್ಯ ಮನು ಕುಲ ನಿಜ ಧಾಮ

# ಮತ್ತೆದ್ದು ಬರುವೆ

## ಭಾವರಶ್ಮಿ



– ಶೋಭಾ ಮೂರ್ತಿ
("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**

''ಹುಟ್ತಾ ಅಣ್ಣತಮ್ಮಂದಿರು, ಬೆಳೀತಾ ದಾಯಾದಿಗಳು' ಅನ್ನೋ ಮಾತು ಕೇಳಿಲ್ವಾ? ನಮ್ದೂ ಅಷ್ಟೇ. ಹಾಗಂತ ನನಗೆ ಮಾತ್ರ ಈಗ್ಲೂ ಅಣ್ಣನ ಮೇಲೆ ಸಿಟ್ಟಿಲ್ಲ. ಆದ್ರೆ ಅವನು, ತಮ್ಮ ಅನ್ನೋ ವಾಂಛೆನೂ ಇಲ್ದೇ....ವೈರಿ ಹಾಗೆ ಹಗೆ ಸಾಧಿಸ್ತಾನಲ್ಲ, ಅದಕ್ಕೆ ಭಾಳ ನೋವಾಗ್ತದೆ." ನಂದೀಶನ ಸ್ವರದಲ್ಲಿ ಅಪಾರವಾದ ನೋವಿತ್ತು.

"ಹೋಗ್ಲಿ ಬಿಡ್ರಿ, ಯಾರದೋ ಮಾತು ಕೇಳ್ಕೊಂಡು ಹಾಗೆ ನಡ್ಕೋತಾರೆ. ಒಂದಲ್ಲಾ ಒಂದು ದಿನ ಅವ್ರಿಗೂ ನೀವು ಏನು ಅಂತಾ ಅರ್ಥ ಆಗ್ತದೆ. ಅರ್ಥ ಆದ್ರೆ... ಅವರೇ ಪಶ್ಚಾತ್ತಾಪ ಪಡ್ತಾರೆ. ನೀವು ನೊಂದ್ಕೋಬೇಡ್ರಿ." ಗಂಡನನ್ನು ಸಮಾಧಾನಪಡಿಸಿದಳು ಗಾಯತ್ರಿ.

ಪಿತ್ರಾರ್ಜಿತವಾಗಿ ಬಂದ ಆಸ್ತಿಯಲ್ಲಿ ಅಣ್ಣ ತಮ್ಮಂದಿರಿಬ್ಬ-ರಿಗೂ ಭಾಗವಾಗಿ ತೋಟದ ಹೆಚ್ಚಿನ ಭಾಗ ನಂದೀಶನಿಗೂ, ಇನ್ನು ಸ್ವಲ್ಪ ಭಾಗ ತೋಟ, ಊರೊಳಗಿರುವ ದೊಡ್ಡ ಬಂಗಲೆಯಂತಹ ಮನೆ, ಪೇಟೆಬೀದಿಯಲ್ಲಿರುವ ಬಾಡಿಗೆ ಬರುವಂಥ ಒಂದು ದೊಡ್ಡ ಮಳಿಗೆ ಎಲ್ಲವೂ ಹರೀಶನ ಪಾಲಿಗೆ ಬಂದಿತ್ತು.

ಮಳಿಗೆಯನ್ನು ಆಧುನೀಕರಿಸಿ ಹರೀಶ ಬ್ಯಾಂಕ್ ಶಾಖೆಗೆ ಬಾಡಿಗೆಗೆ ಕೊಟ್ಟಿದ್ದ. ಅಲ್ಲದೇ ದೊಡ್ಡ ಆವರಣವಿರುವ ಬಂಗಲೆಯನ್ನು ಆಧುನಿಕ ರೀತಿಯಲ್ಲಿ ನಾಲ್ಕು ಮನೆಗಳಾಗುವಂತೆ ನವೀಕರಿಸಿ ಎಲ್ಲವನ್ನು ಬಾಡಿಗೆಗೆ ಕೊಟ್ಟು, ತಾನು ಅದೇ ಮನೆಯ ಹಿಂದೆ ಹೊಸ ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದ.

ತನ್ನ ಪಾಲಿಗೆ ಬಂದ ಎರಡೆಕರೆ ತೋಟದಲ್ಲಿ ಮಾವು ಬೆಳೆದಿದ್ದ ಹರೀಶ, ಬಾಡಿಗೆ ಹಣದಿಂದ ಜೀವನ ನಡೆಸುತ್ತಾ, ಕೂತು ತಿನ್ನುವ ಉದ್ಯೋಗಸ್ಥನಾಗಿದ್ದ. ತಂದೆ ತಾಯಿ ಇಬ್ಬರೂ ಹೋದಮೇಲೆ ತಮ್ಮನೊಂದಿಗೆ ದೂರದ ನೆಂಟನಂತೆ ವರ್ತಿಸುತ್ತ, ಅಹಂಕಾರದಲ್ಲಿ ಮೆರೆಯತೊಡಗಿದ್ದ.

ಆದರೆ..ನಂದೀಶನ ಸ್ಥಿತಿ ಹಾಗಿರಲಿಲ್ಲ. ಏಳು ಎಕರೆಯಷ್ಟು ತೋಟದ ಹೆಚ್ಚಿನ ಭಾಗ ಅವನಿಗೇ ಬಂದಿದ್ದರೂ..ಬದುಕು ನಡೆಸಲು ಅವನು ಅಹರ್ನಿಶಿ ದುಡಿಯಬೇಕಿತ್ತು. ತಂದೆ ಎಂದೋ ಕಟ್ಟಿಸಿದ್ದ ತೋಟದ ಮನೆಯನ್ನು ದುರಸ್ತಿ ಮಾಡಿ ತನ್ನ ಕುಟುಂಬದ ಜೊತೆ ಅಲ್ಲಿಯೇ ವಾಸವಾಗಿದ್ದ ನಂದೀಶ.

ಗಾಯತ್ರಿ ಬಡ ಕುಟುಂಬದ ಹೆಣ್ಣು. ಅಹಂಕಾರ, ಆಡಂಬರವಿಲ್ಲದ ಬದುಕನ್ನು ಜೀವಿಸಿ ಬಂದವಳಿಗೆ ಗಂಡನಿಗೆ ಹೆಗಲಾಗಿ ದುಡಿಯುವುದು ಕಷ್ಟವಾಗಲಿಲ್ಲ.

ನಂದೀಶನ ತೋಟಕ್ಕೆ ನೀರಿನ ಕೊರತೆ ಇತ್ತು. ಹಾಗೆಂದು ಬೋರ್‌ವೆಲ್, ಬಾವಿ ತೆಗೆಸುವಷ್ಟು ಹಣದ ಅನುಕೂಲ ಅವನಿಗೆ ಇರಲಿಲ್ಲ.



ಸ್ನೇಹಿತರ ಸಲಹೆಯಂತೆ ಸರ್ಕಾರದ ಗಂಗಾ ಕಲ್ಯಾಣ ಯೋಜನೆಯ ಲಾಭಪಡೆಯಲು ಅರ್ಜಿಹಾಕಿದ. ಕೆಲವೇ ದಿನಗಳಲ್ಲಿ ಅವನ ತೋಟಕ್ಕೆ ಸರ್ಕಾರದ ಖರ್ಚಿನಲ್ಲಿ ಬೋರ್‌ವೆಲ್ ಮಂಜೂರಾಗಿ ಬೋರ್‌ವೆಲ್ ಕೊರೆಯಲಾಯಿತು. ಅವನ ಅದೃಷ್ಟವೆನ್ನುವಂತೆ ಬೇಗನೇ ನೀರು ಬಂದು, ಸಾಕ್ಷಾತ್ ಗಂಗೆಯೇ ಅವತ-ರಿಸಿದಷ್ಟು ಸಂತೋಷವಾಯಿತವನಿಗೆ.

ಇನ್ನು ತೋಟಕ್ಕೆ ನೀರಿನ ಚಿಂತೆ ಇಲ್ಲ ಎಂದು ಹಿಂದಿಗಿಂತಲೂ ದಂಪತಿಗಳು ಬೆವರು ಹರಿಸಿ ಹಸಿರು ನಳನಳಿಸುವಂತೆ ಮಾಡಿದರು.

ಇದನ್ನು ನೋಡಿದ ಹರೀಶನ ನಿದ್ದೆ ದೂರವಾಯಿತು. ಕೂಡಿಟ್ಟ ಹಣವನ್ನು ಎಣಿಸುವುದೇ ಕಾಯಕವಾಗಿದ್ದವನಿಗೆ ತಮ್ಮನ ಅಭಿವೃದ್ಧಿ ಎದೆಗೆ ಮುಳ್ಳುಚುಚ್ಚಿದಂತೆ ಭಾಸವಾಗತೊಡಗಿತು.



ನಂದೀಶನ ತೋಟಕ್ಕೆ ಹೊಂದಿಕೊಂಡ ತನ್ನ ತೋಟದ ಅಂಚಿನಲ್ಲಿ..ನಂದೀಶ ಕೊರೆಸಿದ್ದ ಬೋರ್ವೆಲ್‌ಗೆ ಅತಿ ಸಮೀಪವಾಗಿ ಸ್ವಂತ ಹಣದಲ್ಲಿ ಬೋರವೆಲ್ ಕೊರೆಸಿದ. ಸಹಜವಾಗಿ ನಂದೀಶ ಕೊರೆಸಿದ್ದ ಬೋರ್‌ವೆಲ್‌ನಲ್ಲಿ ನೀರು ಬರುವುದು ನಿಂತುಹೋಯಿತು.

ಅಣ್ಣ ಉದ್ದೇಶಪೂರ್ವಕವಾಗಿ ಇಂತಹ ಕೆಲಸ ಮಾಡಿದ್ದಾನೆಂದು ತಿಳಿದಮೇಲೂ ಚಕಾರವೆತ್ತದೇ ಸುಮ್ಮನಾದ ನಂದೀಶ.

ಈಗ ದಂಪತಿಗಳು ಚುರುಕಾದರು. ಅಣ್ಣನ ತೋಟದಿಂದ ಸಾಕಷ್ಟು ದೂರದಲ್ಲಿ ನೀರಿನ ಒರತೆ ಇರುವುದನ್ನು ಕಂಡುಕೊಂಡು ಬಾವಿ ತೋಡಿಸಲು ಮುಂದಾದರು. ಕೂಲಿಕಾರ್ಮಿಕರಿಗೆ ಸಮನಾಗಿ ಇಬ್ಬರೂ ಹಗಲಿರುಳೆನ್ನದೇ ದುಡಿದರು. ಶ್ರಮದ ಪ್ರತಿಫಲವೆನ್ನುವಂತೆ ಬಾವಿಯಲ್ಲಿ ಗಂಗೋದ್ಭವವಾಯಿತು. ಹೇಗೋ ಕಷ್ಟಪಟ್ಟು ಪಂಪ್‌ಸೆಟ್‌ನ್ನು ಹಾಕಿಸಿ ನೀರಿನ ಕೊರತೆಯನ್ನು ನೀಗಿಸಿಕೊಂಡರು. ಇದನ್ನು ಕೇಳಿ ಉರಿದುಬಿದ್ದ ಹರೀಶ, ತನ್ನ ತೋಟದ ಮೂಲಕವೇ ನಂದೀಶನ ತೋಟಕ್ಕೆ ಹೋಗಬೇಕಿದ್ದ ದಾರಿಯಲ್ಲಿ ಅಡ್ಡವಾಗಿ ಬೇಲಿ ಹಾಕಿಸಿದ. ಕೇಳಲು ಹೋದ ನಂದೀಶನನ್ನು ಎಲ್ಲರೆದುರಲ್ಲಿ ಲೇವಡಿ ಮಾಡಿ ಅವಮಾನಿಸಿದ. ಇಷ್ಟಾದರೂ ನಂದೀಶ ತುಟಿ ಪಿಟಕ್ಕೆನ್ನಲಿಲ್ಲ.

ಒಮ್ಮೊಮ್ಮೆ ಅಣ್ಣ ಕೊಡುತ್ತಿರುವ ಕಿರುಕುಳಕ್ಕೆ ಬೇಸತ್ತು ತೋಟವನ್ನು ಮಾರಾಟಮಾಡಿ ಬೇರೆಲ್ಲಾದರೂ ಹೋಗಿಬಿಡೋಣ ಎಂದು ನಂದೀಶನಿಗೆ ಅನಿಸಿದ್ದುಂಟು. ಆದರೆ ತಾಯಂತೆ ಸಲಹುವ ಭೂಮಿಯನ್ನು ಒಮ್ಮೆ ಕಳೆದುಕೊಂಡರೆ ಮತ್ತೆ ಗಳಿಸುವುದು ಬಹಳ ಕಷ್ಟವೆಂದರಿತು ಎಂತಹ ಕಷ್ಟ ಎದುರಾದರೂ ಭೂಮಿತಾಯಿಯ ಸೇವೆಯೇ ನಮ್ಮ ಬದುಕು ಎಂದುಕೊಂಡ.

ನಂದೀಶನ ಮಕ್ಕಳು ಓದಿನಲ್ಲಿ ಬಹಳ ಚುರುಕಾಗಿದ್ದರು. ಅಲ್ಲದೇ ಅಪ್ಪ ಅಮ್ಮನಿಗೆ ತೋಟದ ಎಲ್ಲ ಕೆಲಸಗಳಲ್ಲೂ ಕೈಜೋಡಿಸುತ್ತಿದ್ದರು. ಆದರೆ ಹರೀಶನ ಮಗನ ವಿಚಾರದಲ್ಲಿ ಇದು ತದ್ವಿರುದ್ಧವಾಗಿತ್ತು. ಅಪ್ಪನ ಸೋಮಾರಿತನ ಅವನಲ್ಲಿಯೂ ಮುಂದುವರೆದು ಪೋಲಿ ಹುಡುಗರ ಸಹವಾಸದಿಂದ ಕಲಿಯಬಾರದ್ದನ್ನೆಲ್ಲ ಕಲಿತುಬಿಟ್ಟಿದ್ದ.

ಕಾಲದ ಓಟದಲ್ಲಿ ಹರೀಶನ ಮನೆಯಲ್ಲಿ ಹಣವಿದ್ದರೂ ನೆಮ್ಮದಿ ಮರೀಚಿಕೆಯಾಯಿತು. ಹಾದಿತಪ್ಪಿದ ಮಗ, ಅಪರಾಧಿಯಾಗಿ ಜೈಲು ಸೇರಿ ಹೆತ್ತವರಿಗೆ ಮಾರಕವಾದ.

ನಂದೀಶನ ಕುಟುಂಬದ ಅವಿರತ ಪರಿಶ್ರಮ ಮತ್ತು ಉತ್ತಮ ಸಂಸ್ಕಾರದಿಂದ ಸನ್ಮಾರ್ಗದಲ್ಲಿ ನಡೆದ ಮಕ್ಕಳು ಉದ್ಯೋಗದಲ್ಲಿ ಉನ್ನತ ಸ್ಥಾನವನ್ನಲಂಕರಿಸಿದರು.

ಸದಾ ತಮ್ಮನಿಗೆ ಕೇಡು ಬಯಸುತ್ತ ಕಿರುಕುಳ ಕೊಡುತ್ತಿದ್ದ ಅಣ್ಣ ವೃಧ್ಯಾಪ್ಯದಲ್ಲಿ ಒಂ-ಟಿಯಾಗಿರುವುದನ್ನು ನೋಡಲಾಗದೇ ಅವನ ಊರುಗೋಲಾದ ನಂದೀಶ ಮತ್ತು ಅವನ ಮಕ್ಕಳ ಮುಂದೆ ತಲೆ ತಗ್ಗಿಸಿದ ಹರೀಶನನ್ನು "ದೊಡ್ಡಪ್ಪಾ ನಮಗೆ ಅಪ್ಪ ಬೇರೆ ಅಲ್ಲ, ನೀವು ಬೇರೆ ಅಲ್ಲ. ಕುಟುಂಬದ ಹಿರಿಯರಾಗಿ ನಮ್ಮೊಂದಿಗೆ ಇದ್ಬಿಡಿ." ಎಂದ ತಮ್ಮನ ಮಕ್ಕಳ ಔದಾರ್ಯದ ಮುಂದೆ ಹಿಡಿಯಷ್ಟಾಗಿದ್ದ ಜೀವಕ್ಕೆ ಇದನ್ನೊಪ್ಪದೇ ಅನ್ಯ ಮಾರ್ಗವಿಲ್ಲದಿದ್ದುದು ಮಾತ್ರ ವಿಪರ್ಯಾಸ!